ಸಂಪುಟ : 9 ಸಂಚಿಕೆ 68 ಪುಟ : 4 ಬೆಲೆ: 3.00 ಸೋಮವಾರ ಎಪ್ರಿಲ್ 15 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 68 Pages : 4 Price : 3.00 Monday April 15 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಷಟಸ್ಥಲ್ ಧ್ವಜಾರೋಹಣ, ಪ್ರವಚನ ಕಾರ್ಯಕ್ರಮ

■ವಿಜಯಸಾಕ್ಷಿ ಸುದ್ದಿ, ಗದಗ

2024ನೇ ಸಾಲಿನ ಶ್ರೀ ಜಗದ್ಗುರು ತೋಂಟದಾರ್ಯ ಮಠದ ಜಾತ್ರಾ ಮಹೋತ್ಸವದ ಅಂಗವಾಗಿ ಷಟ್‌ಸ್ಥಲ ಧ್ವಜಾರೋಹಣ ಕಾರ್ಯಕ್ರಮವು ಏ. 15ರ ಮುಂಜಾನೆ 8.30ಕ್ಕೆ ಪರಮಪೂಜ್ಯ ಶ್ರೀ ಜಗದ್ಗುರು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳವರ ಸಾನ್ನಿಧ್ಯದಲ್ಲಿ ಜರುಗಲಿದೆ.

ಜಾತ್ರಾ ಮಹೋತ್ಸವದ ಅಂಗವಾಗಿ ಏ. 15ರಿಂದ ಏ.21ರವರೆಗೆ ಶ್ರೀಮಠದಲ್ಲಿ ಪ್ರತಿದಿನ 7.30 ಗಂಟೆಗೆ ವಿಜಯಪುರ ಜ್ಞಾನಯೋಗಾಶ್ರಮದ ಪೂಜ್ಯ ಸಂಗಮೇಶ್ವರ ದೇವರು ಇವರಿಂದ ಪ್ರವಚನ ಜರುಗಲಿದೆ. ಕಾರಣ ಕಾರ್ಯಕ್ರಮಗಳಲ್ಲಿ ಶ್ರೀಮಠದ ಸದ್ಭಕ್ತರು, ಬಸವಾಭಿಮಾನಿಗಳು ಜಾತ್ರಾ ಸಮಿತಿಯ ಪದಾಧಿಕಾರಿಗಳು, ಲಿಂಗಾಯತ ಪ್ರಗತಿಶೀಲ ಸಂಘ, ಬಸವದಳ-ಬಸವಕೇಂದ್ರದ ಅಧ್ಯಕ್ಷರು, ಸರ್ವ ಸದಸ್ಯರು, ಸಾರ್ವಜನಿಕರು ಉಪಸ್ಥಿತರಿದ್ದು ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕಾಗಿ ಜಾತ್ರಾ ಸಮಿತಿ ಅಧ್ಯಕ್ಷ ಪ್ರೊ. ಕೆ.ಎಚ್. ಬೇಲೂರ ಮತ್ತು ಸರ್ವ ಪದಾಧಿಕಾರಿಗಳು ವಿನಂತಿಸಿದ್ದಾರೆ.

## ಶ್ರೀ ಭೀಮಾಂಬಿಕಾ ತಾಯಿ ಮೂರ್ತಿ ಪ್ರತಿಷ್ಠಾಪನೆ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ಬಳಗಾನೂರ ಗ್ರಾಮದಲ್ಲಿ ಶ್ರೀ ಶಿವಶರಣೆ ಭೀಮಾಂಬಿಕಾ ತಾಯಿ ಮೂರ್ತಿ ಪ್ರತಿಷ್ಠಾಪನೆ ಹಾಗೂ ದೇವಸ್ಥಾನ ಉದ್ಘಾಟನೆ ಸಮಾರಂಭ ಏ.15ರಂದು ಜರುಗಲಿದೆ. ಬೆಳಿಗ್ಗೆ 5 ಗಂಟೆಗೆ ಹೋಮದೊಂದಿಗೆ ಮೂರ್ತಿ ಪ್ರತಿಷ್ಠಾಪನೆ ನಡೆಯಲಿದೆ.

ಬೆಳಿಗ್ಗೆ 11 ಗಂಟೆಗೆ ನಡೆಯಲಿರುವ ಧಾರ್ಮಿಕ ಸಮಾರಂಭವನ್ನು ಚಿಕ್ಕೇನಕೊಪ್ಪದ ಶ್ರೀ ಶಿವಶಾಂತವೀರ ಶರಣರು ಉದ್ಘಾಟಿಸಲಿದ್ದು, ಕೊಪ್ಪಳ ಗವಿಮಠದ ಶ್ರೀ ಅಭಿನವ ಗವಿಸಿದ್ಧೇಶ್ವರ ಮಹಾಸ್ವಾಮೀಜಿ, ಹೊಸಳ್ಳಿಯ ಶ್ರೀ ಅಭಿನವ ಬೂದಿಶ್ವರ ಸ್ವಾಮೀಜಿ, ಬದಾಮಿ ನವಗ್ರಹ ಹಿರೇಮಠದ ಶ್ರೀ ಶಿವಾಚಾರ್ಯ ಸ್ವಾಮೀಜಿ ಸಾನ್ನಿಧ್ಯ ವಹಿಸುವರು. ಇಟಗಿ ಧರ್ಮರ ಮಠದ ಷಣ್ಮುಖಪ್ಪ ಅಜ್ಜನವರು ಅಧ್ಯಕ್ಷತೆ ವಹಿಸುವರು. ಹಾವೇರಿ ಜಿಲ್ಲಾ ಕರ್ಜಗಿಯ ಅರ್ಚಕರಾದ ಶಂಕರ ಕಾರಡಗಿ, ಶಿವಕುಮಾರ ಅಜ್ಜನವರು, ವೇದಮೂರ್ತಿ ರುದ್ರಮುನಿ ಶಾಸ್ತ್ರೀ, ಬಸಯ್ಯ ಶಾಸ್ತ್ರೀ, ಬಸಯ್ಯ ಶಾಸ್ತ್ರೀಜಿ ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

ಸಿದ್ಧಾರೂಢಮಠದ ವೇದಮೂರ್ತಿ ಶಿದ್ದಯ್ಯ ಸ್ವಾಮೀಜಿ, ರಮಾನಂದ ಸ್ವಾಮೀಜಿ, ಶಾಂತಯ್ಯನಮಠದ ಚನ್ನಯ್ಯ ಹೂವಯ್ಯ, ಶಿವಯ್ಯ ಕಾಡಸಿದ್ದಯ್ಯನಮಠ ಅವರಿಂದ ಕಳಸಾರೋಹಣ ಕಾರ್ಯಕ್ರಮ ನಡೆಯಲಿದೆ. ಎಸ್.ಆರ್. ರೊಳ್ಳಿ, ಕುರುಬರ ಸಂಘದ ಜಿಲ್ಲಾಧ್ಯಕ್ಷ ಫಕೀರಪ್ಪ ಹೆಬಸೂರ, ಕೆ.ಬಿ. ಕಂಬಳಿ ಗುರುಗಳು, ಕುರಿ ಮತ್ತು ಉಣ್ಣೆ ನಿಗಮದ ಮಾಜಿ ಅಧ್ಯಕ್ಷ ವೈ.ಎನ್. ಗೌಡರ, ಹನುಮಂತಪ್ಪ ಮಲ್ಲಾಪೂರ, ದೇವಪ್ಪ ಮಾಸ್ತರ ಅತಿಥಿಗಳಾಗಿ ಪಾಲ್ಗೊಳ್ಳುವರು ಎಂದು ಪ್ರಕಟಣೆ ತಿಳಿಸಿದೆ.



■ವಿಜಯಸಾಕ್ಷಿ ಸುದ್ದಿ, ಗದಗ

ಗದುಗಿನ ಶ್ರದ್ಧಾ ಸ್ವರ ಸಂಗೀತ ವೆಲ್ಫೇರ್ ಟ್ರಸ್ಟ್‌ನಲ್ಲಿ ಭಾರತ ರತ್ನ ಡಾ. ಬಿ.ಆರ್. ಅಂಬೇಡ್ಕರರ ಜಯಂತಿಯನ್ನು ಆಚರಿಸಲಾಯಿತು. ಶ್ರದ್ಧಾ ಕಬಾಡಿ ಪ್ರಾರ್ಥನೆ ಗೀತೆಯೊಂದಿಗೆ ಪ್ರಾರಂಭಗೊಂಡ ಸಭೆಯಲ್ಲಿ, ರೈತ ಸಂಘ ಸಂಸ್ಥಾಪಕ ಅಧ್ಯಕ್ಷ ಎಂ.ಪಿ. ಮುಳಗುಂದ, ಡಿ.ಎಚ್. ಕಬಾಡಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಸಂಸ್ಥೆಯ ಅಧ್ಯಕ್ಷ ಉಜ್ವಲ್ ಡಿ.ಕಬಾಡಿ ವಂದಿಸಿದರು. ಸಭೆಯಲ್ಲಿ ಮಹಬೂಬಸಬ್ ಸಿದ್ದಿ, ಇಮಾಮ್ ಸಾಬ್ ಮೊರಬದ, ವಿಶಾಲಾ ಡಿ.ಕಬಾಡಿ, ಜ್ಯೋತಿ ಉ.ಕಬಾಡಿ, ಮತ್ತು ಮಕ್ಕಳು ಹಾಜರಿದ್ದರು.

### ಬಿಜೆಪಿ ಮುಖಂಡ ಅನಿಲ ಮೆಣಸಿನಕಾಯಿ ನೇತೃತ್ವದಲ್ಲಿ ಸಮಾನತೆಯ ಹರಿಕಾರರ ಪುತ್ಥಳಿ ಪ್ರತಿಷ್ಠಾಪನೆ

# 'ಸಮಾನತೆಯ ಮಂದಿರ' ಸ್ಥಾಪನೆಗೆ ಸಂಕಲ್ಪ

■ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ಕುರ್ತಕೋಟಿ ಗ್ರಾಮದಲ್ಲಿ ಬಿಜೆಪಿ ಮುಖಂಡ ಅನಿಲ ಮೆಣಸಿನಕಾಯಿ ಸಂಕಲ್ಪದಂತೆ ಅಂಬೇಡ್ಕರ್ ಜಯಂತಿ ಅಂಗವಾಗಿ ಜಗತ್ತಿಗೆ ಸಮಾನತೆಯ ಸಂದೇಶ ಸಾರಿದ ಶ್ರೀರಾಮ, ಬುದ್ಧ, ಬಸವ, ಅಂಬೇಡ್ಕರ್ ಹಾಗೂ ಸಂತ ಶಿಶುನಾಳ ಶರೀಫರ ಪುತ್ಥಳಿ ಹಾಗೂ ಧರ್ಮಗ್ರಂಥಗಳ ಮೆರವಣಿಗೆ ನಡೆಯಿತು.

ಬಿಜೆಪಿ ಮುಖಂಡ ಅನಿಲ ಮೆಣಸಿನಕಾಯಿ ನೇತೃತ್ವದಲ್ಲಿ ಸಮಾನತೆಯ ಜಾಥಾ ಆರಂಭಕ್ಕೂ ಮುನ್ನ ಅವರ ನಿವಾಸದಲ್ಲಿ ಸಮಾನತೆ ಸಾರಿದ ಮಹನೀಯರ ಪ್ರತಿಮೆಗಳನ್ನು ಪ್ರತಿಷ್ಠಾಪಿಸಲಾಯಿತು.







ಈ ಸಂದರ್ಭದಲ್ಲಿ ಜ. ಡಾ. ತೋಂಟದ ಸಿದ್ಧರಾಮ ಶ್ರೀಗಳ ಸಮ್ಮುಖದಲ್ಲಿ ಸಮಾನತೆಯ ಹರಿಕಾರರಿಗೆ ವಿಶೇಷ ಪೂಜೆ ಸಲ್ಲಿಸಲಾಯಿತು. ಅನಿಲ ಮೆಣಸಿನಕಾಯಿ ಕುಟುಂಬದ ಸದಸ್ಯರು ಶ್ರೀಗಳ ಪಾದಪೂಜೆ ನೆರವೇರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ತೋಂಟದ ಸಿದ್ಧರಾಮ ಶ್ರೀಗಳು, ದೇಶದ ಐಕ್ಯತೆ, ಸಮಗ್ರತೆ ಕಾಯ್ದುಕೊಳ್ಳುವುದಕ್ಕೆ ಡಾ. ಅಂಬೇಡ್ಕರ್ ಅವರು ನೀಡಿದ ಸಂವಿಧಾನ ಒಂದು ದೀವಿಗೆಯಾಗಿದೆ. ಬಹುತ್ವದ ಭಾರತ ಸಂವಿಧಾನವನ್ನು ಪರಿಪಾಲಿಸಬೇಕಾದ ಅವಶ್ಯಕತೆಯಿದೆ. ಆ ನಿಟ್ಟಿನಲ್ಲಿ ಅಂಬೇಡ್ಕರ್ ಜಯಂತಿ ನಿಮಿತ್ತ ಬಿಜೆಪಿ ಮುಖಂಡ ಅನಿಲ ಮೆಣಸಿನಕಾಯಿ ಅವರು ಅಂಬೇಡ್ಕರ್ ತತ್ವಗಳ ಪರಿಪಾಲನೆ ಮತ್ತು ಸರ್ವಧರ್ಮ ಸಮನ್ವಯತೆ ಗೌರವಿಸುವ ಕಾರಣಕ್ಕೆ ಸಮಾತನೆಯ ಸಂದೇಶ ಸಾರಿದ ಹರಿಕಾರರನ್ನು ಪೂಜಿಸಿರುವುದು ಐಕ್ಯತೆಯ ಸಂದೇಶವನ್ನು ಸಾರಿದಂತಾಗಿದೆ ಎಂದರು.

ಬಿಜೆಪಿ ಮುಖಂಡರಾದ ಕಾಂತಿಲಾಲ್ ಬನ್ಸಾಲಿ, ವಸಂತ ಪಡಗದ ಸೇರಿದಂತೆ ಹಲವು ಮುಖಂಡರು ಉಪಸ್ಥಿತರಿದ್ದರು.

> ತೋಂಟದ ಸಿದ್ಧರಾಮ ಶ್ರೀಗಳ ಸಮ್ಮುಖದಲ್ಲಿ ಶ್ರೀರಾಮ, ಬುದ್ಧ, ಬಸವ, ಅಂಬೇಡ್ಕರ್ ಹಾಗೂ ಸಂತ ಶಿಶುನಾಳ ಶರೀಫರ ಸಂದೇಶವನ್ನು ಸಾರುವ ಕಾರ್ಯ ನನ್ನ ಮನೆಯಿಂದಲೇ ಮೊದಲು ಆರಂಭವಾಗಲಿ ಎನ್ನುವ ಕಾರಣಕ್ಕೆ ಸಮಾನತೆಯ ಸಂದೇಶ ಸಾರಿದ ಮಹಾತ್ಮರ ಪ್ರತಿಮೆಗಳನ್ನು ಪ್ರತಿಷ್ಠಾಪನೆ ಮಾಡಲಾಗಿದೆ. ಸಮಾಜದಲ್ಲಿ ಶಾಂತಿ, ನೆಮ್ಮದಿ, ಭಾವೈಕ್ಯತೆ ಬೆಳೆಸಬೇಕು ಎನ್ನುವ ನಿಟ್ಟಿನಲ್ಲಿ ಸಮಾನತೆಯ ಮಂದಿರ ಸ್ಥಾಪನೆಗೆ ಮುಂದಾಗಿದ್ದೇವೆ.
>
> – ಅನಿಲ ಮೆಣಸಿನಕಾಯಿ.
> ಬಿಜೆಪಿ ಮುಖಂಡರು.

### ಪತ್ರಿಕಾಗೋಷ್ಠಿಯಲ್ಲಿ ಜೆಡಿಎಸ್ ಮಾಜಿ ಜಿಲ್ಲಾಧ್ಯಕ್ಷ ಅಂದಾನಯ್ಯ ಕುರ್ತಕೋಟಿಮಠ

# ಪ್ರಾಮಾಣಿಕ ಕಾರ್ಯಕರ್ತರಿಗೆ ಬೆಲೆಯಿಲ್ಲ

■ವಿಜಯಸಾಕ್ಷಿ ಸುದ್ದಿ, ಗದಗ

ಕೋಮುವಾದಿ ಪಕ್ಷದ ಜೊತೆ ಮೈತ್ರಿ ಹಾಗೂ ಕುಮಾರಸ್ವಾಮಿ ಅವರ ಏಕಪಕ್ಷೀಯ ನಿರ್ಧಾರಗಳಿಂದ ಬೇಸತ್ತು ಜೆಡಿಎಸ್ ಪ್ರಾಥಮಿಕ ಸದಸ್ಯತ್ವಕ್ಕೆ ಸಾಮೂಹಿಕ ರಾಜೀನಾಮೆ ನೀಡಲಾಗಿದೆ. ಇಲ್ಲಿ ಪ್ರಾಮಾಣಿಕ ಕಾರ್ಯಕರ್ತರಿಗೆ ಬೆಲೆ ಇಲ್ಲದಂತಾಗಿದೆ ಎಂದು ಜೆಡಿಎಸ್ ಮಾಜಿ ಜಿಲ್ಲಾಧ್ಯಕ್ಷ ಅಂದಾನಯ್ಯ ಕುರ್ತಕೋಟಿಮಠ ಹೇಳಿದರು.

ಭಾನುವಾರ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಜಾತ್ಯಾತೀತ ಜನತಾದಳ ಪಕ್ಷ ಅಧಿಕಾರಕ್ಕಾಗಿ ಕೋಮುವಾದಿ ಪಕ್ಷಗಳೊಂದಿಗೆ ಕೈ ಜೋಡಿಸಿದೆ. ಮೈತ್ರಿಗೂ ಮುನ್ನ ಜಿಲ್ಲಾ ಮಟ್ಟದ ಪದಾಧಿಕಾರಿಗಳು, ಕಾರ್ಯಕರ್ತರ ಅಭಿಪ್ರಾಯ ಪಡೆಯದೆ ಕುಮಾರಸ್ವಾಮಿ ಅವರು ಏಕಪಕ್ಷೀಯ ನಿರ್ಧಾರ ತಳೆದಿದ್ದಾರೆ. ಇದರಿಂದ ಜೆಡಿಎಸ್‌ನ ಜಿಲ್ಲೆಯ ಪ್ರಾಮಾಣಿಕ ಕಾರ್ಯಕರ್ತರು ಬೇಸತ್ತು ಸಾಮೂಹಿಕ ರಾಜೀನಾಮೆ ಕೊಟ್ಟಿದ್ದಾರೆ. ಭವಿಷ್ಯದಲ್ಲಿ ಯಾವ ಪಕ್ಷದ ಜೊತೆ ಗುರುತಿಸಿಕೊಳ್ಳಬೇಕು ಎನ್ನುವ ಕುರಿತು ಸಭೆ ನಡೆಸಿ ನಿರ್ಧರಿಸಲು ತೀರ್ಮಾನಿಸಲಾಗಿದೆ ಎಂದು ತಿಳಿಸಿದರು.



ವಿಧಾನಸಭೆ ಚುನಾವಣೆ ಸಂದರ್ಭದಲ್ಲಿಯೇ ನಾನು ಜಿಲ್ಲಾಧ್ಯಕ್ಷ ಸ್ಥಾನಕ್ಕೆ ರಾಜೀನಾಮೆ ಕೊಟ್ಟಿದ್ದೆ. ಆದರೆ ಅದನ್ನು ಅಂಗೀಕರಿಸಲಿಲ್ಲ. ಮಾಜಿ ಸಚಿವರೊಬ್ಬರು ಮಧ್ಯಪ್ರವೇಶ ಮಾಡಿ, ಬರ ಅಧ್ಯಯನಕ್ಕೆ ತಂಡ ಆಗಮಿಸುವ ಹಿನ್ನೆಲೆಯಲ್ಲಿ ಹಂಗಾಮಿ ಅಧ್ಯಕ್ಷರೊಬ್ಬರನ್ನು ನೇಮಕ ಮಾಡಲಾಗುವುದು, ಮುಂದೆ ಎಲ್ಲರನ್ನೂ ವಿಶ್ವಾಸಕ್ಕೆ ತೆಗೆದುಕೊಂಡು ಹೊಸ ಘಟಕ ರಚಿಸುವುದಾಗಿ ಹೇಳಿದ್ದರು. ಆದರೆ ಅವರು ಏಕಪಕ್ಷೀಯವಾಗಿ ನಿರ್ಧಾರ ತೆಗೆದುಕೊಂಡು ಅಧ್ಯಕ್ಷರನ್ನು ನೇಮಿಸಿದರು. ಅಂದಿನಿಂದ ನಾವೆಲ್ಲಾ ತಟಸ್ಥರಾಗಿ ಉಳಿದಿದ್ದು, ಈಗ ಹೊಸ ರಾಜಕೀಯ ನಡೆ ಕೈಗೊಳ್ಳುವ ನಿರ್ಧಾರಕ್ಕೆ ಬಂದಿದ್ದೇವೆ ಎಂದರು.

ಈ ಸಂದರ್ಭದಲ್ಲಿ ಎಂ.ಆರ್. ಸೋಂಪುರ, ಪ್ರಭುರಾಜಗೌಡ ಪಾಟೀಲ, ಪದ್ಮರಾಜ ಪಾಟೀಲ, ನಜೀರ್ ಡಂಬಳ ಸೇರಿದಂತೆ ಜೆಡಿಎಸ್ ಕಾರ್ಯಕರ್ತರು ಉಪಸ್ಥಿತರಿದ್ದರು.

> 1999ರಿಂದಲೂ ಜೆಡಿಎಸ್ ಪಕ್ಷ ಸಂಘಟನೆಯಲ್ಲಿ ಶ್ರಮಿಸಿದ್ದೇವೆ. ಈ ಅವಧಿಯಲ್ಲಿ ಅನೇಕ ಜನ ಜೆಡಿಎಸ್ ಸೇರ್ಪಡೆಯಾಗಿ ಅಧಿಕಾರ ಅನುಭವಿಸಿ ಪಕ್ಷಾಂತರ ಮಾಡಿದರು. ಅವರ ಜೊತೆ ಅನೇಕ ಕಾರ್ಯಕರ್ತರನ್ನು ಕರೆದೊಯ್ದರು. ಆದರೆ ಪ್ರಾಮಾಣಿಕ ಕಾರ್ಯಕರ್ತರಾದ ನಾವು ಜೆಡಿಎಸ್‌ನಲ್ಲಿಯೇ ಉಳಿದಿದ್ದೇವೆ. ಆದರಿಂದು ಪ್ರಾಮಾಣಿಕ ಕಾರ್ಯಕರ್ತರಿಗೆ ಬೆಲೆ ಇಲ್ಲದಂತಾಗಿದೆ. ಮೈತ್ರಿಯಿಂದಾಗಿ ಉತ್ತರ ಕರ್ನಾಟಕ ಭಾಗದ ಜೆಡಿಎಸ್ ಅಸ್ತಿತ್ವ ಕಳೆದುಕೊಂಡಿದೆ ಎಂದು ಅಂದಾನಯ್ಯ ಕುರ್ತಕೋಟಿಮಠ ಹೇಳಿದರು.

## ಶಹರ ಕಾಂಗ್ರೆಸ್ ಸಮಿತಿಯಿಂದ ಡಾ. ಅಂಬೇಡ್ಕರ್ ಜಯಂತಿ



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೇಟಗೇರಿ ಶಹರ ಕಾಂಗ್ರೆಸ್ ಸಮಿತಿ (ಪರಿಶಿಷ್ಟ ಜಾತಿ) ವಿಭಾಗದ ವತಿಯಿಂದ ಡಾ. ಬಾಬಾಸಾಹೇಬ್ ಅಂಬೇಡ್ಕರ್‌ರ 133ನೇ ಜಯಂತ್ಯುತ್ಸವದ ನಿಮಿತ್ತ ನಗರಸಭೆ ಆವರಣದಲ್ಲಿರುವ ಡಾ. ಅಂಬೇಡ್ಕರ್‌ರ ಪುತ್ಥಳಿಗೆ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಹೆಚ್.ಕೆ. ಪಾಟೀಲ ಮಾಲಾರ್ಪಣೆ ಮಾಡಿ ಗೌರವ ಸಮರ್ಪಿಸಿದರು.

ಈ ಸಂದರ್ಭದಲ್ಲಿ ಮುಖಂಡರಾದ ಬಿ.ಬಿ. ಅಸೂಟಿ. ಬಸವರಾಜ್ ಕಡೇಮನಿ, ಎಸ್. ಎನ್. ಬಳ್ಳಾರಿ, ಶಂಭು ಎನ್. ಕಾಳೆ, ಗುರುರಾಜ್ ಸಂಕಣ್ಣವರ, ಮಂಜುನಾಥ್ ಸಿಂಗಾಡಿ, ಶ್ರೀಕಾಂತ ಸಿಂಗಾಡಿ, ವಾಸು ಹುಣಸಿಮರದ, ಗುರು ಭಜಂತ್ರಿ, ಕಾಶಿನಾಥ ಭಜಂತ್ರಿ, ಪರಮೇಶ ಕಾಳೆ, ಸಂತೋಷ ಬಣಕಾರ, ಕೆಂಚಪ್ಪ ಮ್ಯಾಗೇರಿ, ರಮೇಶ ಚಲವಾದಿ, ಮಲ್ಲಿಕ್ ಸಂಗಾಪೂರ, ಮಂಜು ಕೂರವರ, ಅಜಯ ಪಾಟೀಲ ಮುಂತಾದವರು ಉಪಸ್ಥಿತರಿದ್ದರು.

### ಮುನ್ಸಿಪಲ್ ಕಾಲೇಜು ಮೈದಾನದಲ್ಲಿ ಬಿಜೆಪಿ ಯುವ ಸಮಾವೇಶ । ಮಾಜಿ ಸಚಿವ ಕುಮಾರ ಬಂಗಾರಪ್ಪ ಕರೆ

# ದೇಶವನ್ನು ಬರ ಮುಕ್ತವಾಗಿಸುವ ಸಂಕಲ್ಪ ಮಾಡಿ

■ವಿಜಯಸಾಕ್ಷಿ ಸುದ್ದಿ, ಗದಗ

ಬಸವರಾಜ ಬೊಮ್ಮಾಯಿ ಅವರನ್ನು ಸಂಸತ್ತಿಗೆ ಕಳಿಸಿ, ಪ್ರಧಾನಿ ನರೇಂದ್ರ ಮೋದಿ ಅವರ ನದಿ ಜೋಡಣೆ ಕನಸು ನನಸು ಮಾಡಿ, ದೇಶವನ್ನು ಶಾಶ್ವತವಾಗಿ ಬರಮುಕ್ತ ರಾಷ್ಟ್ರವನ್ನಾಗಿ ಮಾಡುವ ಸಂಕಲ್ಪ ಮಾಡಬೇಕು ಎಂದು ಮಾಜಿ ಸಚಿವ ಕುಮಾರ ಬಂಗಾರಪ್ಪ ಹೇಳಿದರು.

ಭಾನುವಾರ ನಗರದ ಮುನ್ಸಿಪಲ್ ಕಾಲೇಜು ಮೈದಾನದಲ್ಲಿ ನಡೆದ ಬಿಜೆಪಿ ಯುವ ಸಮಾವೇಶದಲ್ಲಿ ಅವರು ಮಾತನಾಡಿದರು.

ಬಸವರಾಜ ಬೊಮ್ಮಾಯಿ ಅವರಂಥ ನಿಸ್ವಾರ್ಥ ಆಡಳಿತಗಾರರನ್ನು ರಾಜ್ಯ ಕಂಡಿಲ್ಲ. ನೀರಾವರಿ ಯೋಜನೆಯ ಭಗೀರಥರಾಗಿ ಅವರು ಹೆಸರಾಗಿದ್ದಾರೆ. ಅಂಥವರನ್ನು ಸಂಸತ್ತಿಗೆ ಕಳಿಸಿ ನರೇಂದ್ರ ಮೋದಿಯವರ ಬಲ ಹೆಚ್ಚಿಸಬೇಕು ಎಂದರು.

ಹಾವೇರಿ-ಗದಗ ಮತಕ್ಷೇತ್ರದ ಬಿಜೆಪಿ ಅಭ್ಯರ್ಥಿ, ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಮಾತನಾಡಿ, ಸಂಸತ್ತು ಪ್ರಜಾಪ್ರಭುತ್ವದ ದೇಗುಲ, ಸಂವಿಧಾನ ನನಗೆ ಧರ್ಮ ಗ್ರಂಥ ಎಂದು ಮೋದಿ ಹೇಳಿದ್ದಾರೆ. ಆದರೆ, ವಿರೋಧ ಪಕ್ಷಗಳು ಬಿಜೆಪಿ ಅಧಿಕಾರಕ್ಕೆ ಬಂದರೆ ಸಂವಿಧಾನ ಬದಲಾವಣೆ ಮಾಡುತ್ತಾರೆ ಎನ್ನುವ ಕೂಗು ಆರಂಭಿಸಿದ್ದಾರೆ. ಆದರೆ ಯಾವುದೇ ಕಾರಣಕ್ಕೂ ಯಾರಿಂದಲೂ ಸಂವಿಧಾನ ಬದಲಾಯಿಸಲು ಸಾಧ್ಯವಿಲ್ಲ ಎಂದರು.



ಕಾಂಗ್ರೆಸ್ ತುಷ್ಟೀಕರಣ ರಾಜಕಾರಣದ ಮೂಲಕ ದೇಶವನ್ನು ಹಿಂದುಳಿಯುವಂತೆ ಮಾಡಿತು. ಆದರೆ ಮೋದಿ ಬಂದ ನಂತರ ರಾಜಕಾರಣದ ದಿಕ್ಕೇ ಬದಲಾಯಿತು. ಯುವಕರಲ್ಲಿ ವಿಶ್ವಾಸ ಮೂಡಿತು. ಆತ್ಮನಿರ್ಭರ ಭಾರತದ ಮೂಲಕ ಡಾ.ಅಂಬೇಡ್ಕರ್ ಅವರ ಕನಸು ನನಸಾಗುತ್ತಿದೆ. ಸಂವಿಧಾನಬದ್ಧ ಆಡಳಿತ ಸಾಧ್ಯವಾಗುತ್ತಿದೆ. ಇಂದಿರಾ ಗಾಂಧಿ 1975 ಜೂನ್ 6ರಂದು ತುರ್ತು ಪರಿಸ್ಥಿತಿ ಘೋಷಣೆ ಮಾಡಿದಾಗಲೇ ಕಾಂಗ್ರೆಸ್ಸಿಗರು ಸಂವಿಧಾನದ ಬಗ್ಗೆ ಮಾತನಾಡುವ ಹಕ್ಕನ್ನು ಕಳೆದುಕೊಂಡಿದ್ದಾರೆ. ತುರ್ತು ಪರಿಸ್ಥಿತಿಯಂತಹ ಪ್ರಮಾದ ಮಾಡಿ, ಲೋಕಸಭೆ ಅವಧಿಯನ್ನು ವಿಸ್ತರಣೆ ಮಾಡಿ, ಸರ್ವಾಧಿಕಾರಿ ಆಡಳಿತ ನಡೆಸಿದವರು ಇವತ್ತು ಸಂವಿಧಾನ ರಕ್ಷಣೆ ಬಗ್ಗೆ ಮಾತಾಡುತ್ತಿದ್ದಾರೆ ಎಂದು ಟೀಕಿಸಿದರು.

ನರಗುಂದ ಶಾಸಕ ಸಿ.ಸಿ. ಪಾಟೀಲ ಮಾತನಾಡಿ, ಪ್ರಧಾನಿ ನರೇಂದ್ರ ಮೋದಿ ಅವರು ದೇಶದ ಆರ್ಥಿಕತೆಯನ್ನು ಸದೃಢಗೊಳಿಸುವ ಮೂಲಕ ದೇಶವನ್ನು ಮುನ್ನಡೆಸುತ್ತಿದ್ದಾರೆ. ಆದರೆ ರಾಜ್ಯ ಕಾಂಗ್ರೆಸ್ ಸರಕಾರ ಗ್ಯಾರಂಟಿ ಹೆಸರಿನಲ್ಲಿ ಸರಕಾರದ ಖಜಾನೆ ಖಾಲಿ ಮಾಡಿದೆ. ಹಿಂದಿನ ಸರಕಾರದ ಎಲ್ಲ ಜನಪರ ಕಾರ್ಯಕ್ರಮಗಳನ್ನು ರದ್ದು ಮಾಡಿ ಅಭಿವೃದ್ಧಿ ವಿರೋಧಿ ನೀತಿ ಅನುಸರಿಸುತ್ತಿದೆ ಎಂದರು.

ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರುಡಗಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಶಿರಹಟ್ಟಿ ಶಾಸಕ ಡಾ. ಚಂದ್ರು ಲಮಾಣಿ, ವಿ.ಪರಿ ಸದಸ್ಯ ಎಸ್.ವಿ. ಸಂಕನೂರ, ನಗರಸಭೆ ಅಧ್ಯಕ್ಷೆ ಉಷಾ ದಾಸರ, ಉಪಾಧ್ಯಕ್ಷೆ ಸುನಂದಾ ಬಾಕಳೆ, ಮುಖಂಡರಾದ ಮೋಹನ ಮಾಳಶೆಟ್ಟಿ, ರವಿ ದಂಡಿನ, ನಾಗರಾಜ ಕುಲಕರ್ಣಿ, ಮುಂಡರಗಿ ಮಂಡಲ ಅಧ್ಯಕ್ಷ ಹೇಮಗಿರೀಶ ಹಾವಿನಾಳ, ಜೆಡಿಎಸ್ ರಾಜ್ಯ ವಕ್ತಾರ ವೆಂಕನಗೌಡ ಗೋವಿಂದಗೌಡ್ರ, ಜೆಡಿಎಸ್ ಜಿಲ್ಲಾಧ್ಯಕ್ಷ ಎಂ.ವೈ. ಮುಧೋಳ ಇತರರು ಉಪಸ್ಥಿತರಿದ್ದರು.

### ಪ್ರಮುಖ ಬೀದಿಗಳಲ್ಲಿ ಬೈಕ್ ರ್‍ಯಾಲಿ

ಯುವ ಸಮಾವೇಶಕ್ಕೂ ಮುನ್ನ ಬಿಜೆಪಿ ಕಾರ್ಯಕರ್ತರು ಗದಗ-ಬೆಟಗೇರಿ ಅವಳಿ ನಗರದಲ್ಲಿ ಬೃಹತ್ ಬೈಕ್ ರ್‍ಯಾಲಿ ನಡೆಸಿದರು. ಅಂಬಾಭವಾನಿ ದೇವಸ್ಥಾನದಿಂದ ಆರಂಭವಾದ ಬೈಕ್ ರ್‍ಯಾಲಿ ಅವಳಿ ನಗರದ ಪ್ರಮುಖ ಬೀದಿಗಳಲ್ಲಿ ಸಂಚರಿಸಿತು. ತೆರೆದ ವಾಹನದಲ್ಲಿ ಬಸವರಾಜ ಬೊಮ್ಮಾಯಿ, ಮಾಜಿ ಸಚಿವ ಕುಮಾರ ಬಂಗಾರಪ್ಪ, ಶಾಸಕ ಸಿ.ಸಿ. ಪಾಟೀಲ, ಡಾ. ಚಂದ್ರು ಲಮಾಣಿ ರೋಡ್ ಶೋದಲ್ಲಿ ಪಾಲ್ಗೊಂಡರು.

## ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಮತದಾನವೂ ಮುಖ್ಯ



■ವಿಜಯಸಾಕ್ಷಿ ಸುದ್ದಿ, ಮುಳಗುಂದ,
ನಮಗೆ ದೇಶ ಸೇವೆ ಎಷ್ಟು ಮುಖ್ಯವೋ, ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಮತದಾನವೂ ಅಷ್ಟೇ ಮುಖ್ಯವಾದದ್ದು. ಪ್ರತಿಯೊಬ್ಬ ಭಾರತಿಯರೂ ತಪ್ಪದೇ ಕಡ್ಡಾಯವಾಗಿ ಮತದಾನ ಮಾಡಿ, ದೇಶದ ಅಭಿವೃದ್ಧಿಗೆ ಸಹಕರಿಸಿ. ನನಗೆ ಮೊದಲ ಬಾರಿಗೆ ಮತದಾನ ಮಾಡುವ ಹಕ್ಕು ಸಿಕ್ಕಿರುವುದು ತುಂಬಾ ಖುಷಿಯಾಗಿದೆ. ನನಗೆ 18ನೇ ವಯಸ್ಸಿನಲ್ಲಿ ಆರ್ಮಿ ಹುದ್ದೆ ದೊರೆತು ಅಹ್ಮದ್ ನಗರದಲ್ಲಿ ಸೇವೆ ಸಲ್ಲಿಸುತ್ತಿರುವುದು ತುಂಬಾ ಖುಷಿಯಿದೆ.

– ಹರ್ಷ ಎಸ್.ನರೆಗಲ್ಲ (ಗದಗ)

## ವೋಟ್ ಫಸ್ಟ್



■ವಿಜಯಸಾಕ್ಷಿ ಸುದ್ದಿ, ಮುಳಗುಂದ,
ಮತದಾನವು ಸಂವಿಧಾನ ನೀಡಿರುವ ಅಮೂಲ್ಯವಾದ ಹಕ್ಕು. ಮತದಾರರು ಆಮಿಷಕ್ಕೆ ಒಳಗಾಗದೆ ಹಕ್ಕು ಚಲಾವಣೆ ಮಾಡಬೇಕು. ಇದರಿಂದ ಸಮರ್ಥ ಅಭ್ಯರ್ಥಿ ಹಾಗೂ ಸಮರ್ಥ ಸರಕಾರ ರಚಿಸಲು ಸಹಕಾರಿಯಾಗುತ್ತದೆ. ನನಗೆ ಮೊದಲ ಬಾರಿಗೆ ಮತದಾನದ ಹಕ್ಕು ದೊರೆತತಿದ್ದು ತುಂಬಾ ಸಂತಸವಾಗುತ್ತಿದೆ.

– ಆದರ್ಶ ಎಸ್.ನರೆಗಲ್ಲ (ಗದಗ)
ಇಂಜಿನಿಯರಿಂಗ್ ವಿದ್ಯಾರ್ಥಿ.

### ಅಮ್ಮಿನಬಾವಿಯ ಧರ್ಮೋತ್ತೇಜಕ ಸಮಾರಂಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು

# ಸಿದ್ಧಾಂತ ಶಿಖಾಮಣಿ ಮನುಕುಲದ ಬೆಳಕು

■ವಿಜಯಸಾಕ್ಷಿ ಸುದ್ದಿ, ಧಾರವಾಡ
ಸಕಲ ಜೀವಾತ್ಮರಿಗೂ ಅನ್ವಯವಾಗಬಹುದಾದ ಆಧ್ಯಾತ್ಮ ಚಿಂತನೆಯ ಮೇರು ಮೌಲ್ಯಗಳ ನಿರೂಪಣೆಯೊಂದಿಗೆ ಸಾತ್ವಿಕ, ಸತ್ಯ ಶುದ್ಧ ಜೀವನ ವಿಧಾನ ಹೊಂದುವಲ್ಲಿ ಮಾರ್ಗದರ್ಶನ ಮಾಡುವ ಶ್ರೇಷ್ಠ ಶಾಸ್ತ್ರ ಗ್ರಂಥ ಸಿದ್ಧಾಂತ ಶಿಖಾಮಣಿಯು ಮನುಕುಲದ ಮಹಾ ಬೆಳಕಾಗಿದೆ ಎಂದು ಬಾಳೆಹೊನ್ನೂರಿನ ರಂಭಾಪುರಿ ಪೀಠದ ಶ್ರೀ ಜಗದ್ಗುರು ಡಾ.ವೀರಸೋಮೇಶ್ವರ ಶಿವಾಚಾರ್ಯ ಭಗವತ್ಪಾದರು ಪ್ರತಿಪಾದಿಸಿದರು.

ಅವರು ತಾಲೂಕಿನ ಅಮ್ಮಿನಬಾವಿ ಸಂಸ್ಥಾನ ಪಂಚಗೃಹ ಹಿರೇಮಠದ ಪ್ರಥಮ ಜಾತ್ರಾ ಮಹೋತ್ಸವವದ ಅಂಗವಾಗಿ ಹಮ್ಮಿಕೊಂಡಿದ್ದ ಧರ್ಮೋತ್ತೇಜಕ ಸಮಾರಂಭದ ಸಾನ್ನಿಧ್ಯ ವಹಿಸಿ ಮಾತನಾಡುತ್ತಿದ್ದರು.

ಸಿದ್ಧಾಂತ ಶಿಖಾಮಣಿಯಲ್ಲಿ ಎಲ್ಲಿಯೂ ನಿರ್ದಿಷ್ಟವಾಗಿ ವೀರಶೈವರನ್ನಷ್ಟೇ ಕೇಂದ್ರೀಕರಿಸಿ ವಿಷಯ ನಿರೂಪಣೆ ಮಾಡದೇ ಸಕಲರ ಲೇಸನ್ನು ಬಯಸಲಾಗಿದೆ. ಎಲ್ಲ ನೆಲೆಗಳಲ್ಲಿ ಮಾನವನ ಮಹೋನ್ನತಿಯನ್ನು ಸಿದ್ಧಾಂತ ಶಿಖಾಮಣಿ ಬಯಸಿದೆ. ಸರ್ವ ಜನಾಂಗಗಳ ಸಮೃದ್ಧಿಯನ್ನು ಶ್ರೀ ಜಗದ್ಗುರು ರೇಣುಕಾದಿ ಪಂಚಾಚಾರ್ಯರು ಹಾಗೂ ಪಂಚಪೀಠಗಳು ಬಯಸುತ್ತ ಬಂದಿವೆ ಎಂದರು.



ಧರ್ಮ, ಜಾತಿ, ಭಾಷೆ, ಪ್ರಾಂತ್ಯಗಳ ಹೆಸರಿನಲ್ಲಿ ದುಷ್ಟ ಶಕ್ತಿಗಳು ಬದುಕಿನ ಸ್ನೇಹ ಭಾವನೆಯನ್ನು ಕಲುಷಿತಗೊಳಿಸುತ್ತಿವೆ. ಈ ನಿಟ್ಟಿನಲ್ಲಿ ಎಚ್ಚರಿಕೆಯಿಂದ ಆಲೋಚನೆ ಮಾಡಿ ಹೆಜ್ಜೆ ಹಾಕಬೇಕಾಗಿದೆ. ಭಾರತೀಯ ಸಂಸ್ಕೃತಿ, ಸಂಸ್ಕಾರ, ಧರ್ಮ ಪರಂಪರೆ, ಆಧ್ಯಾತ್ಮದ ಘನತೆಯನ್ನು ಮರೆಯದೇ ದೇಶಾಭಿಮಾನದಿಂದ ಎಲ್ಲವನ್ನೂ ಸ್ಮರಣೆಯಲ್ಲಿಟ್ಟುಕೊಳ್ಳಬೇಕಾದ ಅಗತ್ಯವಿದೆ. ಅಮ್ಮಿನಭಾವಿ ಪಂಚಗೃಹ ಹಿರೇಮಠದ ಹಿರಿಯ ಮತ್ತು ಕಿರಿಯ ಶ್ರೀಗಳವರು ಆದರ್ಶ ಗುರು–ಶಿಷ್ಯರಾಗಿ ಭಕ್ತಗಣದ ವಿಕಾಸಕ್ಕೆ ಹತ್ತು–ಹಲವು ವಿಧಾಯಕ ಚಿಂತನೆಯನ್ನು ಅಳವಡಿಸುತ್ತಿರುವುದು ತಮಗೆ ಖುಷಿ ತಂದಿದೆ ಎಂದು ರಂಭಾಪುರಿ ಜಗದ್ಗುರುಗಳು ಹೇಳಿದರು.

ಸುಳ್ಳದ ಪಂಚಗೃಹ ಹಿರೇಮಠದ ಶಿವಸಿದ್ಧರಾಮೇಶ್ವರ ಶಿವಾಚಾರ್ಯ ಸ್ವಾಮೀಜಿ ಸಮಾರಂಭ ಉದ್ಘಾಟಿಸಿ ಮಾತನಾಡಿದರು. ಮೈಸೂರು ಅರಮನೆ ಜಪದಕಟ್ಟಿಮಠದ ಮುಮ್ಮಡಿ ಚಂದ್ರಶೇಖರ ಶಿವಾಚಾರ್ಯ ಸ್ವಾಮೀಜಿ, ಅಮ್ಮಿನಬಾವಿ ಪಂಚಗೃಹ ಹಿರೇಮಠದ ಕಿರಿಯ ಶ್ರೀ ಅಭಿನವ ಶಾಂತಲಿಂಗ ಶಿವಾಚಾರ್ಯ ಸ್ವಾಮೀಜಿ ಉಪದೇಶಾಮೃತ ನೀಡಿದರು. ಅಮ್ಮಿನಬಾವಿ ಪಂಚಗೃಹ ಹಿರೇಮಠದ ಹಿರಿಯ ಶ್ರೀ ಶಾಂತಲಿಂಗ ಶಿವಾಚಾರ್ಯ ಸ್ವಾಮೀಜಿ ಅಧ್ಯಕ್ಷತೆ ವಹಿಸಿದ್ದರು. ವಿಜಯನಗರ ಜಿಲ್ಲೆ ಹಂಪಸಾಗರ ನವಲಿ ಹಿರೇಮಠದ ಅಭಿನವ ಶಿವಲಿಂಗ ರುದ್ರಮುನಿ ಶಿವಾಚಾರ್ಯ ಸ್ವಾಮೀಜಿ, ಕಲಬುರ್ಗಿ ಜಿಲ್ಲೆ ಬೆಳಗುಂಪಾ ಬೃಹನ್ಮಠದ ಅಭಿನವ ಪರ್ವತೇಶ್ವರ ಶಿವಾಚಾರ್ಯ ಸ್ವಾಮೀಜಿ, ಸಂಗೊಳ್ಳಿಯ ಗುರುಲಿಂಗ ಶಿವಾಚಾರ್ಯ ಸ್ವಾಮೀಜಿ, ಸತ್ತಿಗೇರಿಯ ಚಂದ್ರಶೇಖರ ಶಿವಾಚಾರ್ಯ ಸ್ವಾಮೀಜಿ ಇದ್ದರು.

**ಗುರುರಕ್ಷೆ**

ತಾ.ಪಂ ಮಾಜಿ ಸದಸ್ಯ ಸುರೇಂದ್ರ ದೇಸಾಯಿ, ಮುಂಬಯಿ ನಗರದ ಅಣು ವಿಜ್ಞಾನಿ ಎಸ್.ಆರ್. ಶಿವಯ್ಯನಮಠ, ಎನ್.ಜಿ. ಪಾಟೀಲ, ಬಸಯ್ಯ ಚಿಕ್ಕಮಠ, ಬಸವರಾಜ ಕಲ್ಯಾಣಪುರ, ಬಸವರಾಜ ಹೊಂಗಲಮಠ, ಇಂದುಮತಿ ಸುಣಕದಮಠ, ಲೋಚನಸಿಂಗ್ ಭಾತಖಂಡೆ, ರುದ್ರಮ್ಮ ಬಸಯ್ಯ ಗುಡಿ, ಗೂಳಪ್ಪ ಉಂಡೋಡಿ, ಮಂಜುನಾಥ ಲಿಗಾಡೆ ಅವರಿಗೆ ಗುರುರಕ್ಷೆ ನೀಡಿ ಆಶೀರ್ವದಿಸಲಾಯಿತು. ಡಾ. ಗುರುಮೂರ್ತಿ ಯರಗಂಬಳಿಮಠ ಸ್ವಾಗತಿಸಿದರು. ವಿವಿಧ ಮಠಾಧೀಶರು ಅಮ್ಮಿನಬಾವಿ ಪಂಚಗೃಹ ಹಿರೇಮಠದ ಉಭಯ ಶ್ರೀಗಳನ್ನು ಗೌರವಿಸಿದರು. ಶ್ರೇಯಾಂಶ ದೇಸಾಯಿ, ಬಸವರಾಜ ಇಟಗಿ, ಸೋಮಲಿಂಗಶಾಸ್ತ್ರಿ ಗುಡ್ಡದಮಠ ಇತರರು ಇದ್ದರು.

## ಅಂಬೇಡ್ಕರರ ತತ್ವ, ಸಿದ್ಧಾಂತಗಳು ಸದಾ ಪ್ರಸ್ತುತ



■ವಿಜಯಸಾಕ್ಷಿ ಸುದ್ದಿ, ಮುಳಗುಂದ
ಅಂಬೇಡ್ಕರರ ತತ್ವ–ಸಿದ್ಧಾಂತಗಳು ಇಂದಿನ ಜೀವನಕ್ಕೆ ಪ್ರಸ್ತುತವಾಗಿವೆ ಎಂದು ಎಸ್‌ಡಿಎಂಸಿ ಅಧ್ಯಕ್ಷ ವಿ.ಡಿ. ಸಿದ್ದನಗೌಡರ ಹೇಳಿದರು.

ಅವರು ಪಟ್ಟಣದ ಸರಕಾರಿ ಮಾದರಿ ಕನ್ನಡ ಗಂಡು ಮಕ್ಕಳ ಶಾಲೆ ನಂ.1ರಲ್ಲಿ ಡಾ. ಬಿ.ಆರ್. ಅಂಬೇಡ್ಕರ್‌ರ ಜಯಂತಿ ನಿಮಿತ್ತ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಮಾತನಾಡಿದರು.

ಜನರ ಜೀವನ ಮಟ್ಟವನ್ನು ಉತ್ತಮಗೊಳಿಸಲು ಶಿಕ್ಷಣ ಪ್ರಮುಖ ಅಸ್ತ್ರವಾಗಿದ್ದು, ಯಾವ ಮಗುವೂ ಶಿಕ್ಷಣದಿಂದ ವಂಚಿತವಾಗಬಾರದು. ಸಂವಿಧಾನ ರಚನೆಯಿಂದ ಪ್ರತಿಯೊಬ್ಬರಿಗೂ ಹಕ್ಕು ಮತ್ತು ಕರ್ತವ್ಯ ನೀಡಿದವರು ಅಂಬೇಡ್ಕರರು. ದೇಶದ ಸರ್ವ ಜನಾಂಗದ ಹಾಗೂ ಶೋಷಿತ ವರ್ಗದ ಪ್ರಗತಿಗಾಗಿ ತಮ್ಮ ಜೀವನವನ್ನೇ ಮೀಸಲಾಗಿಟ್ಟವರು ಎಂದರು.

ಶಾಲಾ ಪ್ರಧಾನ ಗುರು ಪಿ.ಬಿ. ಕೆಂಚನಗೌಡರ, ಎಂ.ಎಂ. ಮೇಗಲಮನಿ, ಕೆ.ಎಂ. ಹೆರಕಲ್ಲ, ಎಸ್.ಎಚ್. ಉಪ್ಪಾರ, ಎಚ್.ಆರ್. ಭಜಂತ್ರಿ, ಟಿ.ವೀಣಾ, ಎಸ್.ವಿ. ಹಿರೇಮಠ, ವಿ.ಎಂ. ಕಂಠಿ, ಎಸ್.ಡಿ. ಪಂಡಿತ ಸೇರಿದಂತೆ ಶಾಲಾ ಮಕ್ಕಳು ಇದ್ದರು.

## ಬಣ್ಣದ ಹೊಂಡ ತುಳುಕಿಸಿದ ಯುವಕರು



■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ
ಇಲ್ಲಿಯ ಪ್ಯಾಟಿ ಹನುಮಂತ ದೇವರ ಜಾತ್ರೆಯ ಅಂಗವಾಗಿ ಯುವಕರು ಸಂಭ್ರಮದಿಂದ ಬಣ್ಣದ ಹೊಂಡ ತುಳುಕಿಸುವ ಮೂಲಕ ಯುಗಾದಿ ಹಬ್ಬವನ್ನು ಆಚರಿಸಿದರು.

ದೇವಸ್ಥಾನದ ಮುಂದೆ 10 ಅಡಿ ಆಳವಾಗಿ ತೆಗೆದಿದ್ದ ಹೊಂಡದಲ್ಲಿ ನೀರು ತುಂಬಿಸಿ ಅದರಲ್ಲಿ ಬಣ್ಣವನ್ನು ಬೆರೆಸಲಾಗಿತ್ತು. ದಾರ್ಮಿಕ ವಿಧಿ–ವಿಧಾನಗಳೊಂದಿಗೆ ಮುತ್ತೈದೆಯರು ಪೂಜೆ ಸಲ್ಲಿಸಿದ ನಂತರ ದೇವಸ್ಥಾನದ ಪೂಜಾರಿ ಮೊದಲು ಹೊಂಡದಲ್ಲಿ ಜಿಗಿದ ನಂತರ ಗ್ರಾಮದ ಯುವಕರು ಹೊಂಡವನ್ನು ತುಳುಕಿಸುತ್ತಾ ಸಂಭ್ರಮಿಸಿದರು.

ಇದಕ್ಕೂ ಪೂರ್ವ ಬೆಳಿಗ್ಗೆ ಮಾರುತಿ ದೇವರ ಮೂರ್ತಿಗೆ ವಿಶೇಷ ಪೂಜೆ ಸಲ್ಲಿಸುವದರೊಂದಿಗೆ ಅಭಿಷೇಕ, ವಿವಿಧ ಪೂಜಾ ಕೈಂಕರ್ಯಗಳನ್ನು ನೆರವೇರಿಸಲಾಯಿತು. ತಳಿರು ತೋರಣಗಳಿಂದ ಸಿಂಗರಿಸಿದ್ದ ದೇವಸ್ಥಾನಕ್ಕೆ ಆಗಮಿಸಿದ ಗ್ರಾಮದ ಭಕ್ತರು ದರ್ಶನ ಪಡೆದು ನೈವೇದ್ಯ ಅರ್ಪಿಸಿದರು.

## ರೋಟರಿ ಸದಸ್ಯರಿಂದ ವೃದ್ಧಾಶ್ರಮಕ್ಕೆ ಭೇಟಿ



■ವಿಜಯಸಾಕ್ಷಿ ಸುದ್ದಿ, ಗದಗ
ರೋಟರಿ ಸಂಸ್ಥೆ ಗದಗ–ಬೆಟಗೇರಿಯ ಸದಸ್ಯರು ವಿಶ್ವ ಆರೋಗ್ಯ ದಿನದಂದು ಜೀವನ ಜ್ಯೋತಿ ಶಿವರತ್ನ ವೃದ್ಧಾಶ್ರಮಕ್ಕೆ ಭೇಟಿ ನೀಡಿದರು. ಡಾ. ಕಮಲಾಕ್ಷಿ ಅಂಗಡಿಯವರು ಹಿರಿಯರು ತಮ್ಮ ಆರೋಗ್ಯವನ್ನು ಯಾವ ರೀತಿ ಕಾಪಾಡಿಕೊಳ್ಳಬೇಕೆಂದು ಸಲಹೆ ನೀಡಿ, ಪ್ರತಿಯೊಬ್ಬರ ಆರೋಗ್ಯದ ಕುರಿತು ಮಾಹಿತಿ ಪಡೆದು ಸಲಹೆಯನ್ನು ನೀಡಿದರು. ಈ ಸಂದರ್ಭದಲ್ಲಿ ವೃದ್ಧಾಶ್ರಮದಲ್ಲಿರುವ ಹಿರಿಯರಿಗೆ ಸದಸ್ಯರು ಹಣ್ಣುಗಳನ್ನು ವಿತರಿಸಿದರು.

ಜೀವನ ಜ್ಯೋತಿ ಶಿವರತ್ನ ವೃದ್ಧಾಶ್ರಮದ ಮೇಲ್ವಿಚಾರಕರಾದ ಮಂಜುಳಾ ಲಕ್ಕುಂಡಿಯವರು ಸರ್ವರನ್ನು ಸ್ವಾಗತಿದರು. ಸಂಸ್ಥೆಯ ಅಧ್ಯಕ್ಷ ರೊ. ಚಂದ್ರಮೌಳಿ, ಕಾರ್ಯದರ್ಶಿ ವೀಣಾ ತಿರ್ಲಾಪೂರ, ಸದಸ್ಯರಾದ ರೊ. ಬಾಲಕೃಷ್ಣ ಪಿ.ಕಾಮತ್, ರೊ. ವಿಶ್ವನಾಥ ಯಲಮಲಿ, ರೊ. ಶಿವಾಚಾರ್ಯ ಹೊಸಳ್ಳಿಮಠ, ರೊ. ಶ್ರೀಧರ ಸುಲ್ತಾನಪೂರ ಮುಂತಾದವರು ಉಪಸ್ಥಿತರಿದ್ದರು.

## ಲೋಕಸಭಾ ಚುನಾವಣೆ 2024: ಬೆಂಗಳೂರಿನಲ್ಲಿ ಮೊದಲ ದಿನವೇ ಮನೆಯಿಂದ 4,459 ಮಂದಿ ಮತದಾನ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು
ಮನೆಯಿಂದ ಮತದಾನ (ವಿಎಫ್‌ಹೆಚ್) ಹಂತ–2ರ ಅಡಿಯಲ್ಲಿ ಶನಿವಾರದಿಂದ ಮತದಾನ ಪ್ರಾರಂಭವಾಗಿದ್ದು, ಬೆಂಗಳೂರು ಉತ್ತರ, ಬೆಂಗಳೂರು ದಕ್ಷಿಣ ಮತ್ತು ಬೆಂಗಳೂರು ಕೇಂದ್ರ ಲೋಕಸಭಾ ಕ್ಷೇತ್ರದ 85 ವರ್ಷಕ್ಕಿಂತ ಮೇಲ್ಪಟ್ಟವರು ಮತ್ತು ಅಂಗವಿಕಲರಲ್ಲಿ 4,459 ಮಂದಿ ಮನೆಯಿಂದಲೇ ಮತ ಚಲಾಯಿಸಿದ್ದಾರೆ ಎಂದು ಚುನಾವಣಾ ಆಯೋಗ ತಿಳಿಸಿದೆ.

ಬೆಂಗಳೂರು ಜಿಲ್ಲಾ ಚುನಾವಣಾಧಿಕಾರಿಗಳ ಕಚೇರಿ ಮಾಹಿತಿ ಪ್ರಕಾರ, ಬೆಂಗಳೂರು ಜಿಲ್ಲೆಯ ಮೂರು ಲೋಕಸಭಾ ಕ್ಷೇತ್ರಗಳಾದ ಬೆಂಗಳೂರು ಉತ್ತರ, ದಕ್ಷಿಣ ಮತ್ತು ಸೆಂಟ್ರಲ್‌ನಲ್ಲಿ 4,459 ಮಂದಿ ಮತ ಚಲಾಯಿಸಿದ್ದಾರೆ. ಬೆಂಗಳೂರು ಸೆಂಟ್ರಲ್‌ನಲ್ಲಿ 1,337 (ಶೇ 74.82), ಬೆಂಗಳೂರು ಉತ್ತರದಲ್ಲಿ 985 (ಶೇ 54.83) ಮತ್ತು ಬೆಂಗಳೂರು ದಕ್ಷಿಣದಲ್ಲಿ 1,313 (ಶೇ 59.04) ಜನರು ಮತ ಚಲಾಯಿಸಿದ್ದಾರೆ.

ಮಹದೇವಪುರ, ಬ್ಯಾಟರಾಯನಪುರ, ದಾಸರಹಳ್ಳಿ, ಯಶವಂತಪುರ, ಆನೇಕಲ್, ಬೆಂಗಳೂರು ದಕ್ಷಿಣ ಮತ್ತು ಯಲಹಂಕ ಒಳಗೊಂಡ ಬೆಂಗಳೂರು ನಗರದಲ್ಲಿ ಒಟ್ಟು 824 ಮಂದಿ ಮತದಾನ ಮಾಡಿದ್ದು, ಶೇ 40.31ರಷ್ಟು ಮತದಾನವಾಗಿದೆ.

ಮಾಹಿತಿ ಪ್ರಕಾರ, 16 ಮತದಾರರು ಗೈರುಹಾಜರಾಗಿದ್ದರು ಮತ್ತು ಇಬ್ಬರು ಮತ ಚಲಾಯಿಸಲು ನಿರಾಕರಿಸಿದ್ದಾರೆ. ಮನೆಯಿಂದ ಮತದಾನಕ್ಕೆ ನೋಂದಾಯಿಸಿಕೊಂಡವರಲ್ಲಿ 18 ಮಂದಿ ಸಾವಿಗೀಡಾಗಿರುವುದಾಗಿ ಅಧಿಕಾರಿಗಳು ತಿಳಿಸಿದ್ದಾರೆ.

ಲೋಕಸಭೆ ಚುನಾವಣೆ ಅಂಗವಾಗಿ ಮನೆಯಿಂದ ಮತದಾನ (ವಿಎಫ್‌ಹೆಚ್) ಹಂತ–2ರ ಅಡಿಯಲ್ಲಿ 85 ವರ್ಷಕ್ಕಿಂತ ಮೇಲ್ಪಟ್ಟವರಿಗೆ ಮತ್ತು ಅಂಗವಿಕಲರಿಗೆ ಮನೆಯಿಂದಲೇ ಮತ ಚಲಾಯಿಸಲು ಒಟ್ಟು ಐದು ದಿನಗಳನ್ನು ನಿಗದಿಪಡಿಸಲಾಗಿದೆ. ಚುನಾವಣಾಧಿಕಾರಿಗಳ ತಂಡ ನೋಂದಾಯಿತರ ಮನೆಗೆ ತೆರಳಿ ಅಂಚೆ ಮತದಾನಕ್ಕೆ ಅವಕಾಶ ನೀಡಲಿದೆ.



## ಕನ್ನಡಿಗರ ಮನೆ ನೆಲಸಮ; ಪರ್ಯಾಯ ವ್ಯವಸ್ಥೆ ಕಲ್ಪಿಸಲು ಗೋವಾ ಮುಖ್ಯಮಂತ್ರಿಗೆ ಸಿದ್ದರಾಮಯ್ಯ ಮನವಿ



■ವಿಜಯಸಾಕ್ಷಿ ಸುದ್ದಿ, ಬೆಂಗಳೂರು
ನೆರೆಯ ಗೋವಾದಲ್ಲಿ ಕನ್ನಡಿಗರ ಮನೆಗಳನ್ನು ನೆಲಸಮ ಮಾಡಲಾಗಿದೆ ಎಂಬ ಆರೋಪದ ಬಗ್ಗೆ ಕಳವಳ ವ್ಯಕ್ತಪಡಿಸಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ, ಅಲ್ಲಿನ ನಿವಾಸಿಗಳಿಗೆ ಪರ್ಯಾಯ ವ್ಯವಸ್ಥೆ ಕಲ್ಪಿಸುವವರೆಗೆ ತೆರವು ಪ್ರಕ್ರಿಯೆಯನ್ನು ತಕ್ಷಣವೇ ನಿಲ್ಲಿಸುವಂತೆ ಗೋವಾ ಮುಖ್ಯಮಂತ್ರಿಗೆ ಭಾನುವಾರ ಮನವಿ ಮಾಡಿದ್ದಾರೆ.

ಎಲ್ಲ ಸ್ಥಳಾಂತರಗೊಂಡ ಕುಟುಂಬಗಳಿಗೆ ಪುನರ್ವಸತಿಯನ್ನು ಕಲ್ಪಿಸುವಂತೆ ಅವರು ಗೋವಾ ಮುಖ್ಯಮಂತ್ರಿ ಪ್ರಮೋದ್ ಸಾವಂತ್ ಅವರಿಗೆ ಮನವಿ ಮಾಡಿದ್ದಾರೆ.

'ಗೋವಾದ ಸಂಗೋಲ್ಡಾದಲ್ಲಿ ಕನ್ನಡಿಗರಿಗೆ ಸೇರಿದ ಮನೆಗಳನ್ನು ಕೆಡವಿದ ಘಟನೆಯಿಂದ ತೀವ್ರ ಕಳವಳಗೊಂಡಿದ್ದೇನೆ. ಆ ಕುಟುಂಬಗಳಿಗೆ ಪರ್ಯಾಯ ವ್ಯವಸ್ಥೆಯನ್ನು ಕಲ್ಪಿಸುವವರೆಗೆ ತೆರವು ಪ್ರಕ್ರಿಯೆಯನ್ನು ನಿಲ್ಲಿಸುವಂತೆ ನಾನು ಗೋವಾದ ಮುಖ್ಯಮಂತ್ರಿ ಡಾ. ಪ್ರಮೋದ್ ಸಾವಂತ್ ಅವರಿಗೆ ಮನವಿ ಮಾಡುತ್ತೇನೆ' ಎಕ್ಸ್‌ನಲ್ಲಿ ಸಿದ್ದರಾಮಯ್ಯ ಪೋಸ್ಟ್ ಮಾಡಿದ್ದಾರೆ.

ಪ್ರತಿ ಸಂತ್ರಸ್ತ ಕುಟುಂಬದ ಘನತೆ ಮತ್ತು ಸ್ಥಿರತೆಯನ್ನು ನಾವು ಎತ್ತಿಹಿಡಿಯುವುದು ನಿರ್ಣಾಯಕವಾಗಿದೆ ಎಂದು ಅವರು ಹೇಳಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಮ್ಮ ಪೋಸ್ಟ್‌ನಲ್ಲಿ ಮಾಧ್ಯಮ ವರದಿಗಳು ಮತ್ತು ಮನೆ ನೆಲಸಮಗೊಳಿಸುವ ಚಿತ್ರಗಳನ್ನು ಸಹ ಹಂಚಿಕೊಂಡಿದ್ದಾರೆ.

## ದ್ವಿತೀಯ ಪಿಯುಸಿಯಲ್ಲಿ ಸಾಧನೆ

■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ
ಇಲ್ಲಿಯ ಬಾ.ಹೊ. ಪಾಟೀಲ ಸಂಯುಕ್ತ ಪ.ಪೂ ಕಾಲೇಜಿನ ದ್ವಿತೀಯ ಪಿಯುಸಿ ಫಲಿತಾಂಶ ಶೇ 58.69ರಷ್ಟಾಗಿದೆ. ಪರೀಕ್ಷೆಗೆ ಹಾಜರಾದ 46 ವಿದ್ಯಾರ್ಥಿಗಳಲ್ಲಿ 27 ವಿದ್ಯಾರ್ಥಿಗಳು ಉತೀರ್ಣರಾಗಿದ್ದಾರೆ. ಪ್ರಸ್ತುತ ಫಲಿತಾಂಶದಲ್ಲಿ 4 ವಿದ್ಯಾರ್ಥಿಗಳು ಉನ್ನತ ದರ್ಜೆ, 14 ವಿದ್ಯಾರ್ಥಿಗಳು ಪ್ರಥಮ ದರ್ಜೆ, 8 ವಿದ್ಯಾರ್ಥಿಗಳು ದ್ವಿತೀಯ ದರ್ಜೆ ಹಾಗೂ ಓರ್ವ ವಿದ್ಯಾರ್ಥಿ ತೃತೀಯ ದರ್ಜೆಯಲ್ಲಿ ಉತ್ತೀರ್ಣರಾಗಿದ್ದಾರೆ.





ಇವರಲ್ಲಿ ಯಮನೂರಪ್ಪ ಪಚ್ಚೇರ 558 (ಶೇ.93) ಅಂಕ ಂಪಡೆದು ಕಾಲೇಜಿಗೆ ಪ್ರಥಮ ಸ್ಥಾನ ಪಡೆದಿದ್ದಲ್ಲದೆ ಕಾಲೇಜಿನ ಈವರೆಗಿನ ಫಲಿತಾಂಶದ ಹೊಸ ದಾಖಲೆ ಸೃಷ್ಟಿಸಿದ್ದಾನೆ. ಮುತ್ತಪ್ಪ ಚೋಳಮ್ಮನವರ 545 (ಶೇ.90.83) ಅಂಕ ಪಡೆದು ಕಾಲೇಜಿಗೆ ದ್ವಿತೀಯ, ಶಂಕರಲಿಂಗ ಪೂಜಾರ 526 (ಶೇ.87.66) ಅಂಕ ಪಡೆದು ಕಾಲೇಜಿಗೆ ತೃತೀಯ ಸ್ಥಾನ ಪಡೆದಿದ್ದಾನೆ. ಕಾಲೇಜಿಗೆ ಕೀರ್ತಿ ತಂದ ವಿದ್ಯಾರ್ಥಿಗಳಿಗೆ ಸಂಸ್ಥೆಯ ಅಧ್ಯಕ್ಷರು, ಉಪಾಧ್ಯಕ್ಷರು, ಕಾರ್ಯದರ್ಶಿಗಳು, ಆಡಳಿತ ಮಂಡಳಿಯ ಸರ್ವ ಸದಸ್ಯರು, ಸಿಬ್ಬಂದಿಗಳು ಅಭಿನಂದಿಸಿದ್ದಾರೆ.

## ಜಕ್ಕಲಿಯಲ್ಲಿ ಪವಿತ್ರ ರಂಜಾನ್ ಹಬ್ಬ ಆಚರಣೆ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ
ಸಮೀಪದ ಜಕ್ಕಲಿ ಗ್ರಾಮದ ಈದ್ಗಾ ಮೈದಾನದಲ್ಲಿ ನೂರಾರು ಮುಸ್ಲಿಂ ಬಾಂಧವರು ಸಾಮೂಹಿಕ ಪ್ರಾರ್ಥನೆ ಸಲ್ಲಿಸುವ ಮೂಲಕ ಪವಿತ್ರ ರಂಜಾನ್ ಹಬ್ಬವನ್ನು ಸಡಗರ ಸಂಭ್ರಮದೊಂದಿಗೆ ಆಚರಿಸಿದರು.

ಇದಕ್ಕೂ ಮೊದಲು ಮುಸ್ಲಿಂ ಬಾಂಧವರು ಮುಂಜಾನೆ 9 ಗಂಟೆಗೆ ಊರ ಮಧ್ಯದ ಜುಮ್ಮಾ ಮಸೀದಿಯಿಂದ ಮೆರವಣಿಗೆ ಹೊರಟು ಗ್ರಾಮದ ಪ್ರಮುಖ ಬೀದಿಗಳ ಮೂಲಕ ಊರ ಹೊರ ವಲಯದಲ್ಲಿರುವ ಈದ್ಗಾ ಮೈದಾನದವರೆಗೆ ಮೆರವಣಿಗೆ ನಡೆಸಿದರು.

ಶಾಂತಿ, ಸಹಬಾಳ್ವೆಯ ಸಂಕೇತವಾಗಿರುವ ರಂಜಾನ್ ಹಬ್ಬವನ್ನು ಶ್ರದ್ಧಾ ಭಕ್ತಿಯಿಂದ ಆಚರಿಸಿದ ಮುಸ್ಲಿಂ ಸಮುದಾಯದವರು, ಬಡ ಜನರಿಗೆ ದಾನ, ದೇಣಿಗೆ ನೀಡಿದ್ದು ವಿಶೇಷವಾಗಿತ್ತು.

ಅಧ್ಯಕ್ಷತೆ ವಹಿಸಿದ್ದ ರವೀಂದ್ರನಾಥ ದೊಡ್ಡಮೇಟಿ ಮಾತನಾಡಿ, ದಿನನಿತ್ಯ ಹತ್ತು ಹಲವು ಸಮಸ್ಯೆಗಳಿಂದ ಬಳಲುತ್ತಿರುವ ಜನರಿಗೆ ಈ ಪವಿತ್ರ ಧಾರ್ಮಿಕ ರಂಜಾನ್ ಮಾನಸಿಕ ನೆಮ್ಮದಿ ನೀಡುತ್ತದಯಲ್ಲದೇ, ಈ ತಿಂಗಳಲ್ಲಿ ಉಪವಾಸ ವ್ರತ (ರೋಜಾ) ಮಾಡುವುದರಿಂದ ವ್ಯಕ್ತಿಯು ದುಶ್ಚಟಗಳಿಂದ ದೂರವಿರಲು ಸಾಧ್ಯ ಎಂದರು.

ತಾ.ಪಂ ಮಾಜಿ ಸದಸ್ಯ ಮಲ್ಲಣ್ಣ ಮೇಟಿ ಮಾತನಾಡಿ, ಅಲ್ಲಾನನ್ನು ಮನದಲ್ಲಿ ನೆನದು ಸಮಾಜದಲ್ಲಿ ಶಾಂತಿ, ನೆಮ್ಮದಿಯಿಂದ ನಾವೆಲ್ಲರೂ ಒಂದೇ ಎನ್ನುವ ತತ್ವದ ಅಡಿಯಲ್ಲಿ ಜೀವನ ಸಾಗಿಸುವುದು ಪ್ರತಿಯೊಬ್ಬ ಮುಸ್ಲಿಂ ಬಾಂಧವರ ಕರ್ತವ್ಯ ಎಂದರು.

ಗ್ರಾ.ಪಂ ಮಾಜಿ ಅಧ್ಯಕ್ಷ ಅಶೋಕಪ್ಪ ಯಾವಗಲ್ಲ ಮಾತನಾಡಿದರು. ನಜೀರಸಾಬ ಬಸಾಪೂರ ರಂಜಾನ್ ಮಹತ್ವ ಕುರಿತು ತಿಳಿಸಿದಲ್ಲದೇ, ಇಸ್ಲಾಂ ಧರ್ಮದ ಸಾರವನ್ನು ಬೋಧಿಸಿದರು. ಪತ್ರಕರ್ತ ಸಂಗಮೇಶ ಮೆಣಸಗಿ, ವೀರಭದ್ರಪ್ಪ ಗಾಣಿಗೇರ, ಅಂಜುಮನ್ ಇಸ್ಲಾಂ ಕಮಿಟಿಯ ಚೇರ್ಮನ್ ಯಮನೂರಸಾಬ ನದಾಫ್, ಗ್ರಾಮದ ಅಂಜುಮನ್ ಇಸ್ಲಾಂ ಕಮೀಟಿಯ ಸದಸ್ಯರು, ಬೂದಿಹಾಳ ಗ್ರಾಮದ ಮುಸ್ಲಿಂ ಬಾಂಧವರು ಸೇರಿದಂತೆ ಇನ್ನು ಅನೇಕರು ಉಪಸ್ಥಿತರಿದ್ದರು. ಶಿಕ್ಷಕ ರಾಜು ನದಾಫ್ ಸ್ವಾಗತಿಸಿ, ಕಾರ್ಯಕ್ರಮ ನಿರೂಪಿಸಿದರು.



ಗದಗ–ಬೆಟಗೇರಿ ನಗರಸಭೆ ಪೌರಕಾರ್ಮಿಕರ ನೌಕರರ ಸಂಘದ ವತಿಯಿಂದ ಡಾ. ಬಿ.ಆರ್. ಅಂಬೇಡ್ಕರರ ಜಯಂತಿಯನ್ನು ಗದಗ–ಬೆಟಗೇರಿ ನಗರಸಭೆ ಆವರಣದಲ್ಲಿರುವ ಡಾ. ಅಂಬೇಡ್ಕರರ ಪುತ್ಥಳಿಗೆ ಮಾಲಾರ್ಪಣೆ ಮಾಡುವ ಮೂಲಕ ಆಚರಿಸಲಾಯಿತು. ಈ ಸಂದರ್ಭದಲ್ಲಿ ಅಧ್ಯಕ್ಷ ಚಂದ್ರು ಹಾದಿಮನಿ, ನಿರ್ದೇಶಕ ನಾಗರಾಜ ಬಳ್ಳಾರಿ, ಹೇಮೇಶ ಯಟ್ಟಿ, ಕಾರ್ಯದರ್ಶಿ ಮರಿಯಪ್ಪ ಕೊಟ್ನಿಕಲ್, ಹಿರಿಯ ಆರೋಗ್ಯ ನಿರೀಕ್ಷಕ ಆನಂದ ಬದಿ, ಎಂ.ಎಂ. ಮಕಾನದಾರ, ಶೇರುದಾರ ಸದಸ್ಯರು ಉಪಸ್ಥಿತರಿದ್ದರು.

## ಬೆಳಧಡಿಯಲ್ಲಿ ಡಾ. ಬಿ.ಆರ್. ಅಂಬೇಡ್ಕರ ಜಯಂತಿ



■ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ಬೆಳಧಡಿ ಗ್ರಾಮದಲ್ಲಿ ಮಹಾನ್ ಮಾನವತಾವಾದಿ, ಸಂವಿದಾನ ಶಿಲ್ಪಿ, ಭಾರತ ರತ್ನ ಡಾ. ಬಾಬಾಸಾಹೇಬ ಅಂಬೇಡ್ಕರ್‌ರ ಜಯಂತಿಯನ್ನು ಸಕಲ ಗೌರವಗಳೊಂದಿಗೆ ಆಚರಿಸಲಾಯಿತು.

ಗ್ರಾಮದ ಅಂಬೇಡ್ಕರ್ ಸರ್ಕಲ್‌ನಲ್ಲಿ ಡಾ. ಬಾಬಾಸಾಹೇಬರ ಮೂರ್ತಿಗೆ ಪೂಜೆ ಸಲ್ಲಿಸುವ ಮೂಲಕ ಗ್ರಾಮದ ಮುಖಂಡರು, ಸಂಘಟಕರು ಅಂಬೇಡ್ಕರ ಜಯಂತಿ ಆಚರಿಸಿದರು. ಈ ಸಂದರ್ಭದಲ್ಲಿ ತಾಂಡಾದ ನಾಯಕ ಚಂದು ನಾಯಕ, ಮುಖಂಡರಾದ ಕುಬೇರಪ್ಪ ಪವಾರ, ಶಿಕ್ಷಕರಾದ ಕೆ.ಸಿ. ನಾಭಾಪುರ, ಹೇಮಂತ್ ಬೇವಿನಕಟ್ಟಿ, ಪಾಂಡು ಚವ್ಹಾಣ ಮಾತನಾಡಿ, ಭಾರತದ ನಾಗರಿಕರಾದ ನಾವು ಭಾರತವನ್ನು ಒಂದು ಸಾರ್ವಭೌಮ, ಸಮಾಜವಾದಿ, ಪ್ರಜಾಸ್ತಾತ್ಮಕ ಗಣರಾಜ್ಯವೆಂದು ಘೋಷಿಸುತ್ತ ಎಲ್ಲರು ಸಮಾನರಾಗಿ ಸಹೋದರತ್ವದಿಂದ ಡಾ. ಅಂಬೇಡ್ಕರರು ನೀಡಿದ ಕೊಡುಗೆಗಳನ್ನು ಸ್ಮರಿಸುತ್ತ ಅವರು ಹಾಕಿಕೊಟ್ಟ ಸಂವಿಧಾನದ ಸನ್ಮಾರ್ಗದಲ್ಲಿ ಸಾಗೋಣ ಎಂದು ನುಡಿದರು.

ಈ ಸಂದರ್ಭದಲ್ಲಿ ಹಿರಿಯರಾದ ಟಿ.ಡಿ. ಪೂಜಾರ, ಶಿಕ್ಷಕರಾದ ಶಂಕರ ನಾಯಕ, ಈಶ್ವರ ಹೊಸಮನಿ, ಗೋವಿಂದ ಡೋಣಿ, ಮನೋಹರ ಕಾರಭಾರಿ, ನಾರಾಯಣ ಪವಾರ, ಮಾಂತೇಶ ಚವ್ಹಾಣ, ಲಕ್ಷ್ಮಣ ಭಾವಿಮನಿ, ಪಾಂಡುರಂಗ ನಾಯಕ, ಉಮೇಶ ಡೋಣಿ, ಸಂತೋಷ ನಾಯಕ, ಠಾಕಪ್ಪ ಚವ್ಹಾಣ, ಡಿ.ಆರ್ ಲಮಾಣಿ, ಅರ್ಜುನ್ ನಾಯಕ, ಸಂಜೀವ, ತುಳಚಪ್ಪ, ಸಂತೋಷ, ಕಪಿಲ, ಲೋಕಪ್ಪ, ಜಗದೀಶ, ವೆಂಕಟೇಶ, ಚಂದಪ್ಪ, ಮಂಜು, ಆನಂದ, ರಾಮು, ಠಾಕ್ರಪ್ಪ ಮುಂತಾದವರು ಉಪಸ್ಥಿತರಿದ್ದರು.

### ಭಾರತೀಯ ಜನತಾ ಪಾರ್ಟಿ ಜಿಲ್ಲಾ ಕಚೇರಿಯಲ್ಲಿ ಡಾ. ಅಂಬೇಡ್ಕರ್ ಜಯಂತಿ


## ಡಾ. ಅಂಬೇಡ್ಕರರು ಮಾಹಾನ್ ಮಾನವತಾವಾದಿ

■ವಿಜಯಸಾಕ್ಷಿ ಸುದ್ದಿ, ಗದದ

ಸಾಮಾಜಿಕ ಸಮಾನತೆಗಾಗಿ, ಜನರ ಹಕ್ಕುಗಳ ರಕ್ಷಣೆ, ಪಾಲನೆಗಾಗಿ ಸಂವಿಧಾನವನ್ನು ರಚಿಸಿದವರು ಮಾಹಾನ್ ಮಾನವತಾವಾದಿ ಬಾಬಾಸಾಹೇಬ ಅಂಬೇಡ್ಕರರು. ಅಂದು ಅವರು ದೂರ ದೃಷ್ಟಿಯಿಂದ ರಚಿಸಿದ ಪವಿತ್ರ ಸಂವಿಧಾನದ ಆಡಿಯಲ್ಲಿ ಇಂದು ನಾವೆಲ್ಲರೂ ಸುರಕ್ಷಿತ, ಸಾಮಾಜಿಕ ನ್ಯಾಯ ಹಾಗೂ ಸಮಾನತೆಯಿಂದ ಬದುಕುಲು ಸಾಧ್ಯವಗಿದೆ ಎಂದು ಮಾಜಿ ಸಚಿವ ಸಿ.ಸಿ. ಪಾಟೀಲ ಹೇಳಿದರು.

ಅವರು ಬಾರತೀಯ ಜನತಾ ಪಕ್ಷದ ಜಿಲ್ಲಾ ಕಚೇರಿಯಲ್ಲಿ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರರ ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿದರು.

ವಿ.ಪ ಸದಸ್ಯ ಎಸ್.ವ್ಹಿ. ಸಂಕನೂರ ಮಾತನಾಡಿ, ಡಾ. ಬಿ.ಆರ್. ಅಂಬೇಡ್ಕರರದು ಅತಿ ಸಂಘರ್ಷದ ಜೀವನ. ಹೆಜ್ಜೆ ಹೆಜ್ಜೆಗೂ ಅವರು ದಿಟ್ಟತನದಿಂದ ನೂರಾರು ಸವಾಲುಗಳನ್ನು ಎದುರಿಸಿ ತಮ್ಮ ಬ್ಯಾರಿಸ್ಟರ್ ಪದವಿ ಮುಗಿಸಿ ದೇಶ ಮತ್ತು ಜನರ ಸೇವೆಗಾಗಿ ತಮ್ಮ ಜೀವನವನ್ನೇ ಮುಡಿಪಾಗಿಟ್ಟರು. 4 ವಿವಿಧ ಸ್ನಾತಕೋತ್ತರ ಪದವಿಗಳನ್ನು ಪಡೆದ ಏಕೈಕ ವ್ಯಕ್ತಿ ಬಾಬಾಸಾಹೇಬ ಅಂಬೇಡ್ಕರ ಆಗಿದ್ದರು. ಕಾರಣ ಅವರು ಲಕ್ಷ್ಮೀ ಪುತ್ರರಾಗದೆ, ಸರಸ್ವತಿ ಪುತ್ರ ಎನಿಸಿಕೊಂಡಿದ್ದರು ಎಂದರು.





ಬಿಜೆಪಿ ಗದಗ ಜಿಲ್ಲಾ ಅಧ್ಯಕ್ಷ ರಾಜು ಕುರಡಗಿ ಮಾತನಾಡಿ, ಬಾಬಾಸಹೇಬ ಅಂಬೇಡ್ಕರರ ಸಂಘರ್ಷದ ಜೀವನ ಇಂದಿನ ಯುವಕರಿಗೆ ಪ್ರೇರಣೆಯಾಗಿದೆ. ಎಂತಹ ಕಷ್ಟ ಬಂದರೂ ತಮ್ಮ ನಿರ್ಧಾರ ಬದಲಾಯಿಸದೆ, ತನ್ನ ಗುರಿಯನ್ನು ಹೇಗೆ ಸಾಧಿಸಬೇಕು ಎಂಬುದಕ್ಕೆ ಅವರ ಜೀವನ ಚರಿತ್ರೆ ಮಾರ್ಗಸೂಚಿಯಾಗಿದೆ ಎಂದರು.

ಈ ಸಂದರ್ಭದಲ್ಲಿ ಮಾಜಿ ಜಿಲ್ಲಾಧ್ಯಕ್ಷ ಎಂ.ಎಸ್. ಹಿರೇಮಠ, ಮಹಿಳಾ ಮೋರ್ಚಾ ಅಧ್ಯಕ್ಷೆ ನಿರ್ಮಾಲಾ ಕೊಳ್ಳಿ, ನಗರಸಭೆ ಅಧ್ಯಕ್ಷೆ ಉಷಾ ದಾಸರ್, ಉಪಾಧ್ಯಕ್ಷೆ ಸುನಂದಾ ಬಾಕಳೆ, ಜಿಲ್ಲಾ ವಕ್ತಾರ ಎಂ.ಎಂ. ಹಿರೇಮಠ, ಸಹ ವಕ್ತಾರ ದತ್ತಣ್ಣ ಜೊಶಿ, ಮಾಧ್ಯಮ ಪ್ರಮುಖ ರಾಜು ಹೊಂಗಲ, ಸಹ ಪ್ರಮುಖ ಶ್ರೀನಿವಾಸ ಹುಬ್ಬಳ್ಳಿ, ಗದಗ ಜಿಲ್ಲಾ ಕಾನೂನು ಪ್ರಕೋಷ್ಠದ ಸಂಚಾಲಕ ಕೆ.ಪಿ. ಕೋಟಿಗೌಡರ, ಪ್ರಕೋಷ್ಠಗಳ ಜಿಲ್ಲಾ ಸಂಯೋಜಕ ಶಶಿಧರ ದಿಂಡೂರ, ಹಿರಿಯರಾದ ಕಾಂತಿಲಾಲ ಬನ್ಸಾಲಿ, ತೋಟುಸಾ ಬಾಂಡಗೆ, ಬಿ.ಎಚ್. ಲದ್ವಾ ವಕೀಲರು, ಜಗನ್ನಾಥಸಾ ಬಾಂಡಗೆ, ಸಂಗಮೇಶ ದುಂದೂರ, ಯುವ ಮೋರ್ಚಾ ಅಧ್ಯಕ್ಷ ಸಂತೋಷ ಅಕ್ಕಿ, ವಿನಾಕ ಹಬೀಬ, ಸುಧೀರ ಕಾಟಿಗಾರ, ಎಸ್.ಸಿ ಮೋರ್ಚಾ ಜಿಲ್ಲಾ ಅಧ್ಯಕ್ಷ ಮಂಜುನಾಥ ಮುಳಗುಂದ, ಅಮರೇಶ ಬೆಟಗೇರಿ, ಮಂಜುನಾಥ ಶಾಂತಗೇರಿ, ಅನಿಲ ಅಬ್ಬಗೇರಿ, ಸಂತೋಷ ಮೇಲಗೇರಿ, ಪ್ರಶಾಂತ ನಾಯ್ಕರ, ವಿನೋದ ಹಂಸನೂರು ಮುಂತಾದವರು ಉಪಸ್ಥಿತರಿದ್ದರು.



ಲಕ್ಕುಂಡಿ: ಬಾಪೂಜಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ ಡಾ. ಬಿ.ಆರ್. ಅಂಬೇಡ್ಕರರ 133ನೇ ಜಯಂತಿಯನ್ನು ಭಾವಚಿತ್ರಕ್ಕೆ ಪೂಜೆ ಸಲ್ಲಿಸುವದರೊಂದಿಗೆ ಸಂಭ್ರಮದಿಂದ ಆಚರಿಸಲಾಯಿತು. ಪ್ರಧಾನ ಗುರುಮಾತೆ ಆರ್.ಬಿ. ಬರದ್ವಾಡ, ಹಿರಿಯ ಶಿಕ್ಷಕ ಬಸವರಾಜ ಗರ್ಜಪ್ಪನವರ ಸೇರಿದಂತೆ ಸಹ ಶಿಕ್ಷಕರು, ವಿದ್ಯಾರ್ಥಿಗಳು ಹಾಜರಿದ್ದರು.

### ಚೈತನ್ಯ ಕ್ರೀಡಾ ಸಂಸ್ಥೆಯಿಂದ ಅಟ್ಯಾಪಟ್ಯಾ ತರಬೇತಿ ಕಾರ್ಯಾಗಾರ

## ಸಂಸ್ಥೆಯ ಕಾರ್ಯ ಶ್ಲಾಘನೀಯ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಕಳೆದ 17 ವರ್ಷಗಳ ಹಿಂದೆ ಸ್ಥಾಪನೆಯಾದ ಚೈತನ್ಯ ಗ್ರಾಮೀಣ ಅಭಿವೃದ್ಧಿ ಸಂಸ್ಥೆಯ ಅಂಗ ಸಂಸ್ಥೆಯಾದ ಚೈತನ್ಯ ಕ್ರೀಡಾ ಸಂಸ್ಥೆಯ ಕಾರ್ಯ ಶ್ಲಾಘನೀಯ. ಈ ಸಂಸ್ಥೆಯ ಅಡಿಯಲ್ಲಿ ಅಟ್ಯಾಪಟ್ಯಾ ತರಬೇತಿ ಪಡೆಯುತ್ತಿರುವ ನೀವು ಸುದೈವಿಗಳು. ಯಾವುದೇ ಕಾರ್ಯವನ್ನು ಶ್ರದ್ಧೆಯಿಂದ ನಿರ್ವಹಿಸಿದರೆ ಯಶಸ್ಸು ಸಿಗುತ್ತದೆ. ಇಂದಿನಿಂದ ಈ ಆಟ್ಯಾಪಟ್ಯಾ ತರಬೇತಿ ಪಡೆಯಲು ಬಂದಿರುವ ನೀವು ಇದನ್ನು ಶ್ರದ್ಧೆಯಿಂದ ಕಲಿತು ಉತ್ತಮ ಆಟಗಾರರಾಗಿ ಹೊಮ್ಮಿರಿ. ನಿಮ್ಮ ತರಬೇತಿ ಯಶಸ್ವಿಯಾಗಲಿ ಎಂದು ನಿವೃತ್ತ ಮುಖ್ಯ ಶಿಕ್ಷಕ ಅರುಣ ಬಿ. ಕುಲಕರ್ಣಿ ಹೇಳಿದರು.

ಅವರು ಪಟ್ಟಣದ ಬಸ್ ನಿಲ್ದಾಣದ ಎದುರಿಗಿನ ಶಾಲಾ ಬಯಲಿನಲ್ಲಿ 20 ದಿನಗಳ ಕಾಲ ಚೈತನ್ಯ ಕ್ರೀಡಾ ಸಂಸ್ಥೆಯಿಂದ ಹಮ್ಮಿಕೊಂಡಿರುವ ಅಟ್ಯಾಪಟ್ಯಾ ತರಬೇತಿ ಕಾರ್ಯಾಗಾರದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿದರು.





ನರೇಗಲ್ಲದಲ್ಲಿ 17ವರ್ಷಗಳ ಹಿಂದೆ ಸ್ಥಾಪನೆಯಾದ ಚೈತನ್ಯ ಗ್ರಾಮೀಣ ಅಭಿವೃದ್ಧಿ ಸಂಸ್ಥೆಯು ತನ್ನ ಅನೇಕ ಕ್ರಿಯಾಶೀಲ ಚಟುವಟಿಕೆಗಳ ಮೂಲಕ ಈ ನಾಡಿನ ಸಾಹಿತ್ಯಾಸಕ್ತರ ಮತ್ತು ಕ್ರೀಡಾಪ್ರೇಮಿಗಳ ಮನವನ್ನು ಗೆದ್ದಿದೆ. ಅದರ ಅಂಗ ಸಂಸ್ಥೆಯಾದ ಚೈತನ್ಯ ಕ್ರೀಡಾ ಸಂಸ್ಥೆಯಿಂದಲೂ ಅನೇಕ ಮಕ್ಕಳು ರಾಜ್ಯ, ರಾಷ್ಟ್ರ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ತಮ್ಮ ಪ್ರತಿಭೆಯನ್ನು ತೋರ್ಪಡಿಸಿ ಸಂಸ್ಥೆಗೆ ಮತ್ತು ನರೇಗಲ್ಲ ಪಟ್ಟಣಕ್ಕೆ ಹೆಸರು ತಂದಿದ್ದಾರೆ. ಇದಕ್ಕೆಲ್ಲ ಮುಖ್ಯ ಕಾರಣರು ಸಂಸ್ಥೆಯ ಅಧ್ಯಕ್ಷರಾದ ನಿಂಗರಾಜ ಬೇವಿನಕಟ್ಟಿ, ಮುಖ್ಯ ತರಬೇತುದಾರರಾದ ರಫೀಕ್ ರೇವಡಿಗಾರ, ಹಿರಿಯ ದೈಹಿಕ ಶಿಕ್ಷಕ ಆರ್. ಎಸ್. ನರೇಗಲ್ಲ ಮತ್ತು ಶಿಕ್ಷಕ ಕುಂಬಾರವರು. ಈ ನಾಲ್ಕೂ ರತ್ನಗಳು ಅಟ್ಯಾಪಟ್ಯಾ ಆಟದಲ್ಲಿ ನಮ್ಮ ನರೇಗಲ್ಲದ ಕೀರ್ತಿಯನ್ನು ಹೆಚ್ಚಿಸಿದ್ದಾರೆ ಎಂದರು.

ರಾಷ್ಟ್ರೀಯ ಕಬಡ್ಡಿ ಆಟಗಾರ ಸಂತೋಷ ಹನುಮಸಾಗರ, ಅಂತಾರಾಷ್ಟ್ರೀಯ ಅಟ್ಯಾಪಟ್ಯಾ ಕ್ರೀಡಾಪಟು ಭೀಮಮ್ಮ ಪೂಜಾರ ಕಾರ್ಯಕ್ರಮ ಉದ್ಘಾಟಿಸಿ ತರಬೇತಿ ಶಿಬಿರದಲ್ಲಿ ಭಾಗವಹಿಸಿದ್ದ ಕ್ರೀಡಾಪಟುಗಳಿಗೆ ಶುಭ ಹಾರೈಸಿದರು.

ಸಂಸ್ಥೆಯ ಅಧ್ಯಕ್ಷ ಎನ್.ಕೆ. ಬೇವಿನಕಟ್ಟಿ ಕಾರ್ಯಕ್ರಮವನ್ನುದ್ದೇಶಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಸಂಸ್ಥೆಯ ಮುಖ್ಯ ತರಬೇತುದಾರ ಮಹಮ್ಮದ ರಫೀಕ್ ರೇವಡಿಗಾರ, ಸಂಪನ್ಮೂಲ ವ್ಯಕ್ತಿಗಳಾದ ಶಿಕ್ಷಕ ವಿ.ಎ. ಕುಂಬಾರ, ಆರ್.ಎಸ್. ನರೇಗಲ್ಲ, ಎಂಸಿಎಸ್ ಶಾಲೆಯ ಎಸ್‌ಡಿಎಂಸಿ ಅಧ್ಯಕ್ಷ ತಿಮ್ಮರಡ್ಡಿ ಬಂಡಿವಡ್ಡರ, ಚಂದ್ರಶೇಖರ ಹಂಚಿನಾಳ, ಪೊಲೀಸ್ ಇಲಾಖಾ ಸಿಬ್ಬಂದಿ ವಿಜಯ ಗೋದಿಗನೂರ, ಆನಂದ ಕೊಂಡಿ, ಮಂಜುನಾಥ ಬ್ಯಾಳಿ ಸೇರಿದಂತೆ ಇನ್ನಿತರರು ಇದ್ದರು.

## ಜಿಲ್ಲಾ ಸ್ಲಂ ಸಮಿತಿಯಿಂದ ಡಾ. ಅಂಬೇಡ್ಕರ್ ಜಯಂತಿ



■ವಿಜಯಸಾಕ್ಷಿ ಸುದ್ದಿ, ಗದಗ

ಸ್ಲಂ ಜನಾಂದೋಲನ ಕರ್ನಾಟಕ ಮತ್ತು ಗದಗ ಜಿಲ್ಲಾ ಸ್ಲಂ ಸಮಿತಿಯಿಂದ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ 133ನೇ ಜಯಂತಿಯಂದು ನಗರಸಭೆಯ ಅವರಣದಲ್ಲಿರುವ ಅಂಬೇಡ್ಕರರ ಪುತ್ಥಳಿಗೆ ಮಾಲಾರ್ಪಣೆ ಮಾಡುವ ಮೂಲಕ ಗೌರವ ಸಲ್ಲಿಸಲಾಯಿತು.

ಸ್ಲಂ ಸಮಿತಿ ಅಧ್ಯಕ್ಷ ಇಮ್ತಿಯಾಜ ಆರ್.ಮಾನ್ವಿ ಮಾತನಾಡಿ, ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರರು ಬರೆದಿರುವ ಸಂವಿಧಾನದಿಂದ ದೇಶದಲ್ಲಿ ಸಾಮಾಜಿಕ ನ್ಯಾಯ ಮತ್ತು ಸಮಾನತೆಯನ್ನು ಕಾಣಲು ಸಾಧ್ಯವಾಗಿದೆ. ನಮ್ಮ ದೇಶದ ಸಂವಿಧಾನವನ್ನು ರಚಿಸುವಲ್ಲಿ ಡಾ. ಬಿ.ಆರ್. ಅಂಬೇಡ್ಕರರು ಪ್ರಮುಖ ಪಾತ್ರ ವಹಿಸಿದರು ಎಂದರು.

ಈ ಸಂದರ್ಭದಲ್ಲಿ ಗದಗ ಜಿಲ್ಲಾ ಸ್ಲಂ ಸಮಿತಿ ಉಪಾಧ್ಯಕ್ಷ ರವಿಕುಮಾರ ಬೆಳಮಕರ, ಕಾರ್ಯದರ್ಶಿ ಅಶೋಕ ಕುಸಬಿ, ಮುಖಂಡರಾದ ಮಕ್ತುಮಸಾಬ ಮುಲ್ಲಾನವರ, ಶಿವಾನಂದ ಶಿಗ್ಲಿ, ಮಂಜುನಾಥ ಶ್ರೀಗಿರಿ, ನಗೀನಾ ಯಲಿಗಾರ, ಇಬ್ರಾಹಿಮ ಮುಲ್ಲಾ, ಶಂಕ್ರಪ್ಪ ಮೊಲಿಮನಿ, ಮುಸ್ಕಾನ ಯಲಿಗಾರ, ಮೆಹರುನಿಸಾ ಢಾಲಾಯತ, ಸಾಕ್ರುಬಾಯಿ ಗೋಸಾವಿ, ಮೆಹಬೂಬಸಾಬ ಬಳ್ಳಾರಿ, ಬಾಷಾಸಾಬ ಡಂಬಳ, ಮಲೇಶಪ್ಪ ಕಲಾಲ, ದೇವೇಂದ್ರಪ್ಪ ಲಕ್ಕುಂಡಿ, ಮೆಹರುನಿಸಾ ಡಂಬಳ ಮುಂತಾದವರು ಉಪಸ್ಥಿತರಿದ್ದರು.

## ಬಿಜೆಪಿ ಎಸ್‌ಸಿ ಮೋರ್ಚಾದಿಂದ ಡಾ.ಅಂಬೇಡ್ಕರ ಜಯಂತಿ



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಭಾರತೀಯ ಜನತಾ ಪಕ್ಷದ ಎಸ್.ಸಿ ಮೋರ್ಚಾ ಅಧ್ಯಕ್ಷ ಮಂಜುನಾಥ ಶಿವಪ್ಪ ಮುಳಗುಂದ ನೇತೃತ್ವದಲ್ಲಿ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ ಅವರ 133ನೇ ಜಯಂತಿ ಅಂಗವಾಗಿ ಗದಗ ಬೆಟಗೇರಿ ನಗರಸಭೆ ಆವರಣದಲ್ಲಿರುವ ಡಾ. ಬಿ.ಆರ್. ಅಂಬೇಡ್ಕರ ಪ್ರತಿಮೆಗೆ ವಿಪ ಸದಸ್ಯ ಎಸ್.ವಿ. ಸಂಕನೂರ ಹಾಗೂ ಬಿಜೆಪಿ ಜಿಲ್ಲಾಧ್ಯಕ್ಷರಾದ ರಾಜು ಕುರಡಗಿ ಮಾಲಾರ್ಪಣೆ ಮಾಡಿ ಗೌರವಿಸಿದರು.

ಗದಗ ಜಿಲ್ಲಾ ಎಸ್.ಸಿ ಮೋರ್ಚಾ ಅಧ್ಯಕ್ಷ ಮಂಜುನಾಥ ಶಿವಪ್ಪ ಮುಳಗಂದ ಮಾತನಾಡಿ, ಅಂದಿನ ಸಾಮಾಜಿಕ ವ್ಯವಸ್ಥೆಯ ವಿರುದ್ಧ ಸಮಾನತೆಗಾಗಿ ಸಾಮಾಜಿಕ ಸಂಘಟನೆಯ ಮೂಲಕ ಸಾಮಾಜಿಕ ಸಂಘರ್ಷವನ್ನು ಸಾರಿ ಸಂವಿಧಾನದ ಮೂಲಕ ಮೀಸಲಾತಿ ಕಲ್ಪಿಸಿ ಪ್ರತಿಯೊಬ್ಬರೂ ಸ್ವಾಭಿಮಾನದಿಂದ ಬದುಕುವ ಅವಕಾಶವನ್ನು ಡಾ. ಬಿ.ಆರ್. ಅಂಬೇಡ್ಕರರು ನೀಡಿದ್ದಾರೆ ಎಂದರು.

ಈ ಸಂದರ್ಭದಲ್ಲಿ ನಗರಸಭೆಯ ಅಧ್ಯಕ್ಷೆ ಉಷಾ ದಾಸರ, ಬಿಜೆಪಿ ಮುಖಂಡರಾದ ಉಡಚಪ್ಪ ಹಳ್ಳಿಕೇರಿ, ಲಕ್ಷ್ಮಣ ದೊಡ್ಡಮನಿ, ಅಶೋಕ ಮುಳಗುಂದ, ಲಕ್ಷ್ಮಣ ಮುಳಗುಂದ, ಬೂದಪ್ಪ ಹುಣಶೀಮರದ, ಶಂಕರ ಮುಳಗುಂದ, ಚಿದಾನಂದ ಹೊಸಮನಿ ಸೇರಿದಂತೆ ಹಲವರಿದ್ದರು.



ಬೆಟಗೇರಿ: ಮಹಾರಾಣಾ ಪ್ರತಾಪಸಿಂಹ ಶಿಕ್ಷಣ ಸಂಸ್ಥೆಯ ಆವರಣದಲ್ಲಿ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರರ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು. ಶಿಕ್ಷಣ ಸಂಸ್ಥೆಯ ಸಂಸ್ಥಾಪಕ ಗಣೇಶಸಿಂಗ ಬ್ಯಾಳಿಯವರು ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಪುಷ್ಪಾರ್ಪಣೆ ಮಾಡಿದರು. ಈ ಸಂದರ್ಭದಲ್ಲಿ ಪ್ರಾಚಾರ್ಯ ಎ.ಎ. ಹದ್ಲಿ, ಪ್ರ.ಮುಖ್ಯಾಧ್ಯಾಪಕ ಎಚ್.ಎಸ್. ಬ್ಯಾಳಿ ಹಾಗೂ ಸಮಸ್ತ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

### ಲೋಕಸಭೆ ಚುನಾವಣೆ ನಾಮಪತ್ರ ಸಲ್ಲಿಕೆ ಹಿನ್ನೆಲೆ | ಮಹಾನಗರ ಪೊಲೀಸ್ ಆಯುಕ್ತರಿಂದ ಮಾಹಿತಿ

## ತಾತ್ಕಾಲಿಕವಾಗಿ ವಾಹನಗಳ ಮಾರ್ಗ ಬದಲಾವಣೆ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಲೋಕಸಭೆ ಚುನಾವಣೆ ನಾಮಪತ್ರ ಸಲ್ಲಿಕೆ ನಿಮಿತ್ತ ಏ. 15ರಿಂದ ಏ. 18ರವರೆಗೆ ಧಾರವಾಡ ನಗರದಲ್ಲಿ ತಾತ್ಕಾಲಿಕವಾಗಿ ವಾಹನಗಳ ಮಾರ್ಗ ಬದಲಾವಣೆ ಮಾಡಲಾಗಿದೆ ಎಂದು ಮಹಾನಗರ ಪೊಲೀಸ್ ಆಯುಕ್ತರಾದ ರೇಣುಕಾ ಸುಕುಮಾರ ತಿಳಿಸಿದ್ದಾರೆ.



ಈ ಕುರಿತು ಪ್ರಕಟಣೆ ನೀಡಿರುವ ಅವರು, ಬೆಳಗಾವಿ ಕಡೆಯಿಂದ ಹುಬ್ಬಳ್ಳಿ ಕಡೆಗೆ ಹೋಗುವ ವಾಹನಗಳು–ಜುಬ್ಲಿ ಸರ್ಕಲ್, ಸಿಎಸ್‌ಐ ಕಾಲೇಜ್ ರೋಡ್, ಲೈನ್ ಬಜಾರ ಮುಖಾಂತರ ಎನ್.ಟಿ.ಟಿ.ಎಫ್ ಕ್ರಾಸ್‌ನಿಂದ ಹುಬ್ಬಳ್ಳಿ ಕಡೆಗೆ ಹೋಗಬೇಕು. ಸವದತ್ತಿ ಕಡೆಯಿಂದ ಧಾರವಾಡ ಕಡೆಗೆ ಬರುವ ವಾಹನಗಳು–ಡಿಪೋ ಸರ್ಕಲ್, ಗೊಲ್ಲರ ಓಣಿ ಕ್ರಾಸ್, ಕಮಲಾಪೂರ ಉಸುಕಿನ ಅಡ್ಡಾ, ಮರಾಠಾ ಕಾಲನಿ ರೋಡ್ ಮುಖಾಂತರ ಹೋಗಬೇಕು.

ನವಲಗುಂದ ಕಡೆಯಿಂದ ಧಾರವಾಡ ಕಡೆಗೆ ಬರುವ ವಾಹನಗಳು–ಚರಂತಿಮಠ ಗಾರ್ಡನ್ ಕ್ರಾಸ್, ಕಾಮನಕಟ್ಟಿ ಕೂಟ, ಹೊಸ ಯಲ್ಲಾಪೂರ ಸರ್ಕಲ್, ಸುಣ್ಣದ ಬಟ್ಟಿ ರೋಡ್ ಮೂಲಕ ಲಘು ವಾಹನಗಳು ಮತ್ತು ಹೆಬ್ಬಳ್ಳಿ ಅಗಸಿ, ಡಿಪೋ ಸರ್ಕಲ್, ಗೊಲ್ಲರ ಓಣಿ, ಮರಾಠಾ ಕಾಲನಿ ರೋಡ್ ಮೂಲಕ ಬಸ್ಸುಗಳು ಹೋಗಬೇಕು.

ಹಳಿಯಾಳ ಕಡೆಯಿಂದ ಧಾರವಾಡ ಕಡೆಗೆ ಬರುವ ವಾಹನಗಳು–ದಾಸನಕೊಪ್ಪ ಸರ್ಕಲ್, ಜರ್ಮನ್ ಸರ್ಕಲ್, ಉಪನಗರ ಪಿ.ಎಸ್ ಮೂಲಕ ಹೋಗಬೇಕು. ಗೋವಾ ಕಡೆಯಿಂದ ಧಾರವಾಡ ಕಡೆಗೆ ಬರುವ ವಾಹನಗಳು–ಜರ್ಮನ್ ಸರ್ಕಲ್, ಹಳೇ ಎಸ್.ಪಿ ಆಫೀಸ್ ಕ್ರಾಸ್, ನಾಯಕ ಅಡ್ಡಾ ಕ್ರಾಸ್, ಹಳೇ ಬಸ್ ನಿಲ್ದಾಣ ಮೂಲಕ ಹೋಗಬೇಕು.

ಹುಬ್ಬಳ್ಳಿ ಮತ್ತು ಕಲಘಟಗಿ ಕಡೆಯಿಂದ ಧಾರವಾಡ ಕಡೆಗೆ ಬರುವ ವಾಹನಗಳು–ಕೋರ್ಟ್ ಸರ್ಕಲ್, ಕಾಸ್ಮಸ್ ಕ್ಲಬ್ ರೋಡ್, ಲೈನ್ ಬಜಾರ, ಸಿಎಸ್‌ಐ ಕಾಲೇಜ್ ರೋಡ್ ಮತ್ತು ಬಾಗಲಕೋಟ್ ಪೆಟ್ರೋಲ್ ಪಂಪ್, ಮಹಿಷಿ ರೋಡ್, ಎಮ್ಮಿಕೇರಿ ಕ್ರಾಸ್, ಹೆಡ್ ಪೋಸ್ಟ್ ಆಫೀಸ್, ಕೋರ್ಟ್ ಸರ್ಕಲ್ ಮೂಲಕ ಸಂಚರಿಸಬೇಕೆಂದು ಪೊಲೀಸ್ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ದ್ವಿತೀಯ ಪಿಯುಸಿಯಲ್ಲಿ ಭಾಗ್ಯಶ್ರೀ ಸಾಧನೆ



■ವಿಜಯಸಾಕ್ಷಿ ಸುದ್ದಿ, ಡಂಬಳ

ಪಿಯುಸಿ ದ್ವಿತೀಯ ವರ್ಷದ ವಾರ್ಷಿಕ ಪರೀಕ್ಷೆಯಲ್ಲಿ ದಾವಣಗೇರಿ ನಗರದ ವಿಶ್ವಚೇತನ ವಿದ್ಯಾನಿಕೇತನ ಮಹಾವಿದ್ಯಾಲಯದಲ್ಲಿ ಅಧ್ಯಯನ ಮಾಡುತ್ತಿರುವ ಡಂಬಳ ಗ್ರಾಮದ ವಿದ್ಯಾರ್ಥಿನಿ ಭಾಗ್ಯಶ್ರೀ ಈರಪ್ಪ ಹೊಂಬಳ ವಿಜ್ಞಾನ ವಿಭಾಗದಲ್ಲಿ 600ಕ್ಕೆ 566ಅಂಕ ಪಡೆದು ಶೇ. 94.33 ಅಂಕ ಗಳಿಸಿ ಸಾಧನೆ ಮಾಡಿದ್ದಾರೆ.

ಸಾಧಕ ವಿದ್ಯಾರ್ಥಿನಿಗೆ ಗ್ರಾಮದ ಹಿರಿಯರು, ಕಾಲೇಜಿನ ಪ್ರಾಚಾರ್ಯರು, ಕಾಲೇಜಿನ ಗುರುವೃಂದ, ಪ್ರಾಥಮಿಕ, ಪ್ರೌಢಶಾಲಾ ಶಿಕ್ಷಕರು ಅಭಿನಂದನೆ ಸಲ್ಲಿಸಿದ್ದಾರೆ.





ಗದಗ ನಗರದ ವಿದ್ಯಾದಾನ ಸಮಿತಿಯ ಕನ್ನಡ ಪ್ರಾಥಮಿಕ ಹಾಗೂ ಕ್ಲಾಸಿಕ್ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಭಾರತ ರತ್ನ, ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್‌ರ ಜಯಂತಿಯನ್ನು ಆಚರಿಸಲಾಯಿತು. ಈ ಸಂದರ್ಭದಲ್ಲಿ ಮುಖ್ಯೋಪಾಧ್ಯಾಯ ಎಂ.ವಿ. ಹವಾಲ್ದಾರ, ಎಂ.ಆರ್. ಡೊಳ್ಳಿನ, ಹಿರಿಯ ಶಿಕ್ಷಕರಾದ ಆರ್.ಡಿ. ಪಡೆಸುರ, ಶಾಲೆಯ ಸಮಸ್ತ ಶಿಕ್ಷಕ/ಸಿಬ್ಬಂದಿ ವರ್ಗದವರು

# ಭೂತಾಯಿಗೆ ಹಾಲೆರದ ಭಕ್ತರು



■ವಿಜಯಸಾಕ್ಷಿ ಸುದ್ದಿ, ರೋಣ

ಗ್ರಾಮ ದೇವತೆ ದ್ಯಾಮವ್ವ ದೇವಿಯ ಜಾತ್ರಾ ಮಹೋತ್ಸವದ ನಿಮಿತ್ತ ಭೂತಾಯಿಗೆ ಹಾಲೆರೆಯುವ, 501 ಮಹಿಳೆಯರಿಂದ ಕುಂಭಮೇಳ ಕಾರ್ಯಕ್ರಮ ನೆರವೇರಿತು.

ದ್ಯಾಮವ್ವ ದೇವಿಯ ಜಾತ್ರಾ ಮಹೋತ್ಸವದ ಪ್ರಯುಕ್ತ ಮೊದಲ ದಿನ ಸೀಮೆ ಹದ್ದಿನ ಜಮೀನುಗಳಿಗೆ ಹಾಲು ಎರೆಯಲಾಯಿತು. ನಂತರ ಗ್ರಾಮದ ಮಾರುತೇಶ್ವರ ದೇವಸ್ಥಾನದಿಂದ ಗ್ರಾಮ ದೇವತೆಯ ಭಾವಚಿತ್ರದೊಂದಿಗೆ 501 ಮಹಿಳೆಯರಿಂದ ಕುಂಭಮೇಳ ನಡೆಯಿತು. ಭಕ್ತರು ಶನಿವಾರ ಮಧ್ಯರಾತ್ರಿಯಿಂದ ರವಿವಾರ ಬೆಳಗಿನ ಜಾವದವರೆಗೂ ಭೂತಾಯಿಗೆ ಹಾಲು ಎರೆಯುವ ಕಾರ್ಯದಲ್ಲಿ ತೊಡಗಿದ್ದರು.

ಶಿರಹಟ್ಟಿ ತಾಲೂಕಿನ ಸುಕ್ಷೇತ್ರ ವರವಿ ಮೌನೇಶ್ವರ ಸನ್ನಿಧಾನದ ಹೊಳೆಯಿಂದ ತರಲಾಗಿದ್ದ ಜಲದೊಂದಿಗೆ ಕ್ಷೀರಾಭಿಷೇಕವನ್ನು ಭಕ್ತರು ನೆರವೇರಿಸಿದರು. ಜಾತ್ರಾ ಮಹೋತ್ಸವದ ನಿಮಿತ್ತ ಏ. 15ರಂದು ಗ್ರಾಮದೇವತೆಯ ಚಳ್ಳಾಟ ನಡೆಯಲಿದೆ. ಈ ಸಂಧರ್ಭದಲ್ಲಿ ದೇವಿಯು ಗ್ರಾಮದ ಸರ್ವ ಭಕ್ತರಿಗೆ ದರ್ಶನ ನೀಡಲಿದ್ದು, ದೇವಿಯ ದರ್ಶನ ಸಂದರ್ಭದಲ್ಲಿ ಗ್ರಾಮದ ಒಳಗಡೆ ವಾಹನ ಸಂಚಾರವನ್ನು ನಿಷೇದಿಸಲಾಗುತ್ತದೆ.

# ಅಂಬೇಡ್ಕರರ ಸ್ವಾಭಿಮಾನದ ವ್ಯಕ್ತಿತ್ವ ಮಾದರಿ



■ವಿಜಯಸಾಕ್ಷಿ ಸುದ್ದಿ, ಗದಗ

ಅಂದಿನ ಸಾಮಾಜಿಕ ವರ್ಣ ವ್ಯವಸ್ಥೆಯ ವಿರುದ್ಧ ನಿರಂತರ ಹೋರಾಟ ಮಾಡಿ, ಸಮಾನತೆಯ ದೇಶ ಕಟ್ಟುವಲ್ಲಿ ಅವಿರತ ಶ್ರಮಿಸಿರುವ ಸಂವಿಧಾನ ಶಿಲ್ಪಿ, ಭಾರತ ರತ್ನ ಡಾ. ಬಿ.ಆರ್. ಅಂಬೇಡ್ಕರರ ಸ್ವಾಭಿಮಾನದ ವ್ಯಕ್ತಿತ್ವ ಸರ್ವ ಕಾಲಕ್ಕೂ ಪ್ರಸ್ತುತ ಎಂದು ರಾಜ್ಯ ಸರಕಾರಿ ನೌಕರ ಸಂಘದ ರಾಜ್ಯ ಉಪಾಧ್ಯಕ್ಷರು ಹಾಗೂ ಗದಗ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖಾ ಜಿಲ್ಲಾ ಅಧಿಕಾರಿಗಳಾದ ರವಿ ಗುಂಜೀಕರ ಅಭಿಪ್ರಾಯಪಟ್ಟರು.

ಅವರು ಡಾ. ಅಂಬೇಡ್ಕರ್ ಜಯಂತಿ ಅಂಗವಾಗಿ ಗದಗ-ಬೆಟಗೇರಿ ನಗರಸಭೆಯ ಆವರಣದಲ್ಲಿರುವ ಡಾ. ಬಿ.ಆರ್. ಅಂಬೇಡ್ಕರರ ಪುತ್ಥಳಿಗೆ ಮಾಲಾರ್ಪಣೆ ಮೂಲಕ ಗೌರವ ಸಮರ್ಪಿಸಿ ಮಾತನಾಡಿದರು. ಈ ಸಂದರ್ಭದಲ್ಲಿ ನೌಕರ ಸಂಘದ ಪದಾಧಿಕಾರಿಗಳಾದ ಹಿರೇಮಠ, ಎಸ್.ಆರ್. ಬಂಡಿ, ಗಾಡಗೋಳಿ, ಶರಣು, ಮುತ್ತು ಮಾದರ, ಕರೀಮಸಾಬ ಸುಣಗಾರ, ಶರಣು ಸೇರಿದಂತೆ ಹಲವರಿದ್ದರು.

## ಜಿಲ್ಲಾ ಯುವ ಮೋರ್ಚಾ ಹಮ್ಮಿಕೊಂಡಿದ್ದ 'ಯುವ ಸಮಾವೇಶ'ದಲ್ಲಿ ಬಸವರಾಜ ಬೊಮ್ಮಾಯಿ

# ಕಾಂಗ್ರೆಸ್ ದೇಶವನ್ನು ಹಿಂದೆ ತಳ್ಳಿದೆ

■ವಿಜಯಸಾಕ್ಷಿ ಸುದ್ದಿ, ಗದಗ

ಪ್ರಸ್ತುತ ಲೋಸಭಾ ಚುನಾವಣೆ ಮುಂದಿನ ಜನಾಂಗಕ್ಕಾಗಿ ನಡೆಯುತ್ತಿದೆ. ಮೋದಿಯವರು ಮುತ್ಸದ್ದಿ ನಾಯಕರು. ಅವರು ಮುಂದಿನ ಜನಾಂಗದ ಬಗ್ಗೆ ಯೋಚನೆ ಮಾಡುತ್ತಾರೆ. ಹಿಂದಿನ ರಾಜಕಾರಣಿಗಳು ಯುವಕರು, ಬಡವರ ಬಗ್ಗೆ ಯೋಚನೆ ಮಾಡಲಿಲ್ಲ. ಕೇವಲ ಕೆಲವು ಜನರ ಓಲೈಕೆಗೆ ತುಷ್ಟೀಕರಣ ರಾಜಕಾರಣ ಮಾಡಿ ತಮ್ಮ ರಾಜಕಾರಣ ಮುಂದೆ ಮಾಡಿಕೊಂಡು ದೇಶವನ್ನು ಹಿಂದೆ ತಳ್ಳಿದ್ದಾರೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಗದಗ ಹಾವೇರಿ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಆರೋಪಿಸಿದರು.

ಅವರು ಗದುಗಿನಲ್ಲಿ ರವಿವಾರ ಬಿಜೆಪಿ ಜಿಲ್ಲಾ ಯುವ ಮೋರ್ಚಾ ವತಿಯಿಂದ ಹಮ್ಮಿಕೊಂಡಿದ್ದ 'ಯುವ ಸಮಾವೇಶ' ಉದ್ಘಾಟಿಸಿ ಮಾತನಾಡಿದರು.

ಕಾಂಗ್ರೆಸ್‌ನವರು 1975ರಲ್ಲಿ ತುರ್ತು ಪರಿಸ್ಥಿತಿ ಹೇರುವ ಮೂಲಕ ಸಂವಿಧಾನದ ಬಗ್ಗೆ ಮಾತನಾಡುವ ನೈತಿಕತೆ ಕಳೆದುಕೊಂಡಿದ್ದಾರೆ. ವಿರೋಧ ಪಕ್ಷದ ನಾಯಕರನ್ನು ಜೈಲಿಗೆ ಹಾಕಿದರು. ಎಷ್ಟೋ ಜನರ ಕಗ್ಗೊಲೆಯಾಯಿತು. ಆರ್ಟಿಕಲ್ 42ಕ್ಕೆ ತಿದ್ದುಪಡಿ ತಂದು ಸುಪ್ರೀಂ ಕೋರ್ಟ್ ನ್ಯಾಯಾಧೀಶರನ್ನು ವರ್ಗಾವಣೆ ಮಾಡಿ,



> ಮೋದಿಯವರು ದೇಶದ ಜನರಿಗೆ ಶಾಶ್ವತ ಯೋಜನೆಗಳನ್ನು ನೀಡುತ್ತಿದ್ದಾರೆ. ಪ್ರಧಾನಮಂತ್ರಿ ಆವಾಸ್ ಯೋಜನೆ ಅಡಿಯಲ್ಲಿ 4 ಕೋಟಿ ಮನೆ ನೀಡಿದ್ದಾರೆ. ಉಜ್ವಲ ಯೋಜನೆ ಅಡಿಯಲ್ಲಿ ಮನೆ ಮನೆಗೆ ಗ್ಯಾಸ್ ಸಂಪರ್ಕ, ಜಲ ಜೀವನ್ ಮಿಷನ್ ಅಡಿಯಲ್ಲಿ 75 ಕೋಟಿ ಮನೆಗಳಿಗೆ ನೀರಿನ ಸಂಪರ್ಕ ಕಲ್ಪಿಸಿದ್ದಾರೆ. ಸ್ವಚ್ಛ ಭಾರತ ಯೋಜನೆ ಅಡಿಯಲ್ಲಿ 12 ಕೋಟಿ ಶೌಚಾಲಯ ನಿರ್ಮಾಣ ಮಾಡಿ ಹೆಣ್ಣು ಮಕ್ಕಳ ಗೌರವ ಕಾಪಾಡಿದ್ದಾರೆ. ದೇಶದಲ್ಲಿ 10 ಕೋಟಿ ಉದ್ಯೋಗ ಸೃಷ್ಟಿಯಾಗಿದೆ. ಈ ದೇಶದ ಪ್ರತಿಯೊಬ್ಬ ಭಾರತೀಯ ತಾನು ಭಾರತೀಯ ಎಂದು ಮುಕ್ತವಾಗಿ ಹೇಳುವಂತೆ ಮಾಡಿದ್ದಾರೆ.
>
> **– ಬಸವರಾಜ ಬೊಮ್ಮಾಯಿ.**
> ಹಾವೇರಿ-ಗದಗ ಕ್ಷೇತ್ರದ ಬಿಜೆಪಿ ಅಭ್ಯರ್ಥಿ.

ಸಂವಿಧಾನಕ್ಕೆ ಮರ್ಯಾದೆ ಕೊಡದವರು, ಈಗ ಸಂವಿಧಾನ ಬದಲಾಯಿಸುತ್ತಾರೆ ಎಂದು ಜನರಲ್ಲಿ ಭಯ ಹುಟ್ಟಿಸುವ ಕೆಲಸ ಮಾಡುತ್ತಿದ್ದಾರೆ ಎಂದು ವಾಗ್ದಾಳಿ ನಡೆಸಿದರು.

ಕಾಂಗ್ರೆಸ್‌ನವರು ಮತ್ತೆ ಗ್ಯಾರಂಟಿ ಬಗ್ಗೆ ಹೇಳುತ್ತಿದ್ದಾರೆ. ಜನರ ಮನೆಗೆ ನೀರು, ಕರೆಂಟ್, ರಸ್ತೆ, ರೈತರ ಹೊಲಕ್ಕೆ ವಿದ್ಯುತ್ ಇಲ್ಲದಿದ್ದರೆ ಎಷ್ಟು ದುಡ್ಡು ಕೊಟ್ಟರೆ ಏನು ಪ್ರಯೋಜನ? ಮೋದಿಯವರು ದುಡಿಮೆಯ ಬಗ್ಗೆ ಮಾತನಾಡುತ್ತಾರೆ. ತಾವೂ ದುಡಿಯುತ್ತಾರೆ. ಎಲ್ಲರನ್ನೂ ದುಡಿಯುವಂತೆ ಪ್ರೇರೇಪಿಸುತ್ತಿದ್ದಾರೆ ಎಂದು ಹೇಳಿದರು.

ಗದಗ ನಗರವನ್ನು ಔದ್ಯೋಗಿಕ ಕೇಂದ್ರವನ್ನಾಗಿ ಮಾಡುವ ಕನಸಿದೆ. ಟೆಕ್ಸ್‌ಟೈಲ್ ಹಾಗೂ ಫುಡ್ ಪ್ರೊಸೆಸ್ಸಿಂಗ್ ಉದ್ಯಮಕ್ಕೆ ಹೆಚ್ಚಿನ ಅವಕಾಶ ಇದೆ. ಸಿಂಗಟಾಲೂರು ಯೋಜನೆ ಮೂಲಕ ರೈತರ ಹೊಲಗಳಿಗೆ ನೀರು ಹರಿಸಿ ನೀರಾವರಿ ಕಲ್ಪಿಸಲಾಬುವುದು. ಕೋವಿಡ್ ಸಂದರ್ಭದಲ್ಲಿ ಜನರ ಜೀವ ಉಳಿಸಿ, ಅನ್ನ-ನೀರು ಕೊಟ್ಟಿರುವ ನಾಯಕ ಮೋದಿ ಅವರಿಗೆ ಮತ ಹಾಕುವ ಮೂಲಕ ಋಣ ತೀರಿಸುವ ಕೆಲಸ ಮಾಡಬೇಕೆಂದು ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ಮಾಜಿ ಸಚಿವರಾದ ಕುಮಾರ್ ಬಂಗಾರಪ್ಪ, ಸಿ.ಸಿ. ಪಾಟೀಲ್, ವಿಧಾನ ಪರಿಷತ್ ಸದಸ್ಯಎಸ್.ವಿ. ಸಂಕನೂರು, ಶಾಸಕ ಡಾ. ಚಂದ್ರು ಲಮಾಣಿ ಸೇರಿದಂತೆ ಮುಖಂಡರು ಹಾಜರಿದ್ದರು.

# ಸಂವಿಧಾನದಿಂದ ಮಾತ್ರ ದೇಶದ ಪ್ರಗತಿ ಸಾಧ್ಯ

■ವಿಜಯಸಾಕ್ಷಿ ಸುದ್ದಿ, ರೋಣ

ಸಂವಿಧಾನವು ಸಮಾನತೆಯನ್ನು ಬೋಧಿಸುತ್ತದೆ. ಸಂವಿಧಾನದಿಂದ ಮಾತ್ರ ದೇಶದ ಪ್ರಗತಿ ಸಾಧ್ಯ ಎಂದು ತಹಸೀಲ್ದಾರ ನಾಗರಾಜ.ಕೆ ಹೇಳಿದರು.

ಅವರು ರವಿವಾರ ತಹಸೀಲ್ದಾರ ಕಚೇರಿ ಸಭಾಂಗಣದಲ್ಲಿ ತಾಲೂಕಾಡಳಿತದಿಂದ ಹಮ್ಮಿಕೊಂಡಿದ್ದ ಡಾ. ಬಿ.ಆರ್. ಅಂಬೇಡ್ಕರ್‌ರ 133ನೇ ಜಯಂತ್ಯುತ್ಸವದಲ್ಲಿ ಮಾತನಾಡಿದರು.

ಭವ್ಯ ಭಾರತಕ್ಕೆ ಡಾ. ಬಿ.ಆರ್. ಅಂಬೇಡ್ಕರ್‌ರವರ ಕೊಡುಗೆ ಅಪಾರವಾಗಿದೆ. ದೇಶದ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಬಲಪಡಿಸುವಲ್ಲಿ ನಮ್ಮ ಸಂವಿಧಾನ ಅತ್ಯಂತ ಪ್ರಮುಖ ಪಾತ್ರವನ್ನು ವಹಿಸಿದ್ದು,ಇಡೀ ವಿಶ್ವ ನಮ್ಮ ದೇಶದ ಶ್ರೇಷ್ಠ ಸಂವಿಧಾನವನ್ನು ಒಪ್ಪಿಕೊಳ್ಳುತ್ತಾರೆ. ನಾವೆಲ್ಲರೂ ಸಂವಿಧಾನ ಶಿಲ್ಪಿ ಡಾ. ಅಂಬೇಡ್ಕರರ ದೇಶಪ್ರೇಮವನ್ನು ನಮ್ಮ ಪೀಳಿಗೆಗೆ ತಿಳಿಸಬೇಕಿದೆ ಎಂದರು.

ವಿ.ಬಿ. ಸೋಮನಕಟ್ಟಿಮಠ, ಸಂಗು ನವಲಗುಂದ,



ಸೋಮು ನಾಗರಾಜ, ಮೌನೇಶ ಹಾದಿಮನಿ, ಪ್ರಕಾಶ ಹೊಸಳ್ಳಿ,ಆನಂದ ಚಂಗಳಿ, ಬಾವಾಸಾಬ ಬೆಟಗೇರಿ, ಮುತ್ತಣ್ಣ ಸಂಗಳದ, ಗದಿಗೆಪ್ಪ ಕಿರೇಸೂರ, ಸಂಜಯ ದೊಡ್ಡಮನಿ ಸೇರಿದಂತೆ ಅಧಿಕಾರಿಗಳು, ಸಿಬ್ಬಂದಿ, ದಲಿತ ಸಂಘಟನೆಗಳ ಮುಖಂಡರು ಉಪಸ್ಥಿತರಿದ್ದರು.

ತಾಲೂಕಾ ಪಂಚಾಯತ, ತೋಟಗಾರಿಕೆ ಇಲಾಖೆ, ಸರಕಾರಿ ಆಸ್ಪತ್ರೆ, ಕೃಷಿ ಇಲಾಖೆ ಸೇರಿದಂತೆ ಪಟ್ಟಣದ ಕಾಂಗ್ರೆಸ್ ಪಕ್ಷದ ಕಾರ್ಯಾಲಯದಲ್ಲಿ ಡಾ. ಬಿ.ಆರ್. ಅಂಬೇಡ್ಕರ್‌ರ ಜಯಂತಿಯನ್ನು ಆಚರಿಸಲಾಯಿತು.

# ಗ್ರಾಮ ದೇವತೆಯ ಉತ್ಸವಕ್ಕೆ ಕ್ಷಣಗಣನೆ

■ವಿಜಯಸಾಕ್ಷಿ ಸುದ್ದಿ, ರೋಣ



ಸಮೀಪದ ಮಾರನಬಸರಿ ಗ್ರಾಮದಲ್ಲಿ ಗ್ರಾಮ ದೇವತೆಯ ಉತ್ಸವಕ್ಕೆ ಕ್ಷಣಗಣನೆ ಆರಂಭಗೊಂಡಿದ್ದು, ಏ.14ರಂದು ಭೂತಾಯಿ ಸೀಮೆಗೆ ಹಾಲು ಎರೆಯುವ ಮೂಲಕ ಚಾಲನೆ ನೀಡಲಾಗುವುದು.

ಭೂತಾಯಿ ಸೀಮೆಗೆ ಹಾಲು ಎರೆಯುವ ಸಂಧರ್ಭದಲ್ಲಿ ಶಿರಹಟ್ಟಿ ತಾಲೂಕಿನ ವರವಿ ಮೌನೇಶ್ವರ ಸನ್ನಿದಾನದಲ್ಲಿರುವ ಹೊಳೆಯ ನೀರನ್ನು ಬಳಕೆ ಮಾಡಲಾಗುತ್ತದೆ. ಅಂದಾಜು 2 ಸಾವಿರ ಲೀಟರ್ ಹಾಲನ್ನು ಎರೆಯಲಾಗುತ್ತದೆ.

ಇದೇ ದಿನ ಗ್ರಾಮದ ಹೊರವಲಯದಲ್ಲಿರುವ ಮಾರುತೇಶ್ವರ ದೇವಸ್ಥಾನದಿಂದ 501 ಕುಂಭಮೇಳದ ಮೆರವಣಿಗೆ ಸಹ ಜರುಗಲಿದೆ. ಗ್ರಾಮ ದೇವತೆಗೆ ಮೌನ ವೃತದಿಂದ ತರಲಾಗಿರುವ ಜಲದಿಂದ ಅಭಿಷೇಕ ಹಾಗೂ ಧಾರ್ಮಿಕ ಪೂಜಾ ಕಾರ್ಯಗಳು ಸಹ ಜರುಗಲಿದ್ದು, ಮದ್ಯಾಹ್ನ ದೇವಸ್ಥಾನದ ಆವರಣದಲ್ಲಿ ಅನ್ನಸಂತರ್ಪಣೆ ನಡೆಯಲಿದೆ. ಜಾತ್ರಾ ಮಹೋತ್ಸವದ ಹಿನ್ನೆಲೆಯಲ್ಲಿ ಗ್ರಾಮವನ್ನು ಆಕರ್ಷಕ ವಿದ್ಯುತ್ ದೀಪಾಲಂಕಾರಗಳಿಂದ ಸಿಂಗರಿಸಲಾಗಿದೆ.

## ಪತ್ರಿಕಾಗೋಷ್ಠಿಯಲ್ಲಿ ಸಮಗ್ರ ಅಭಿವೃದ್ಧಿ ವೇದಿಕೆ ಅಧ್ಯಕ್ಷ ಗುರುನಾಥ ದಾನಪ್ಪನವರ

# ಬಿಜೆಪಿಯಲ್ಲಿ ನಿಷ್ಠಾವಂತರ ಕಡೆಗಣನೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಬಿಜೆಪಿ ಪಕ್ಷದ ಹಿರಿಯ ನಾಯಕರು, ಶಾಸಕರು ಮತ್ತು ಪದಾಧಿಕಾರಿಗಳ ನಡೆಯಿಂದ ಮನಸ್ಸಿಗೆ ಸಾಕಷ್ಟು ನೋವು, ಸ್ವಾಭಿಮಾನಕ್ಕೆ ಧಕ್ಕೆಯುಂಟಾಗಿದ್ದು, ಪಕ್ಷದ ಪ್ರಾಥಮಿಕ ಸದಸ್ಯತ್ವಕ್ಕೆ ರಾಜೀನಾಮೆ ನೀಡುತ್ತಿದ್ದೇನೆ. ಕ್ಷೇತ್ರದ ನೊಂದ ಕಾರ್ಯಕರ್ತರ, ಅಭಿಮಾನಿಗಳು ಮತ್ತು ಕೆಲ ಹಿರಿಯರ ಸಲಹೆ-ಸೂಚನೆಯಂತೆ ರಾಜಕೀಯ ನಿರ್ಧಾರ ತೆಗೆದುಕೊಳ್ಳುತ್ತೇನೆ ಎಂದು ಶಿರಹಟ್ಟಿ ಮತಕ್ಷೇತ್ರದ ಸಮಗ್ರ ಅಭಿವೃದ್ಧಿ ವೇದಿಕೆ ಅಧ್ಯಕ್ಷ, ಪಕ್ಷದ ಮುಖಂಡ ಗುರುನಾಥ ದಾನಪ್ಪನವರ ಪಕ್ಷ ಬಿಡುವ ನಿರ್ಧಾರ ಪ್ರಕಟಿಸಿದರು.

ಅವರು ಪಟ್ಟಣದಲ್ಲಿ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದರು. ಭಾರತೀಯ ಜನತಾ ಪಾರ್ಟಿಯಲ್ಲಿ ಬಳಗ ಕಟ್ಟಿಕೊಂಡು ಕಳೆದ 15 ವರ್ಷಗಳಿಂದ ನಿಷ್ಠಾವಂತ ಕಾರ್ಯಕರ್ತನಾಗಿ ಪಕ್ಷ ಸಂಘಟನೆ ಮಾಡಿದ್ದೇನೆ. ಆದರೆ ಇದೀಗ ಕ್ಷೇತ್ರದಲ್ಲಿನ ಪಕ್ಷದ




ಹಿರಿಯರು, ಶಾಸಕರು, ಪದಾಧಿಕಾರಿಗಳು ನನ್ನನ್ನು ಸೇರಿ ನನ್ನ ಬೆಂಬಲಿಗರು, ಕಾರ್ಯಕರ್ತರನ್ನು ಸಂಪೂರ್ಣ ನಿರ್ಲಕ್ಷ್ಯ ಮಾಡುತ್ತಿದ್ದಾರೆ. ಅನಿವಾರ್ಯವಾಗಿ ಬಿಜೆಪಿ ಪ್ರಾಥಮಿಕ ಸದಸ್ಯತ್ವಕ್ಕೆ ಹಾಗೂ ಪಕ್ಷಕ್ಕೆ ರಾಜೀನಾಮೆ ನೀಡುತ್ತಿದ್ದೇನೆ ಎಂದು ಹೇಳಿದರು.

ಇತ್ತೀಚೆಗೆ ಜಿಲ್ಲಾ, ಮಂಡಳ, ನಗರ ಘಟಕಗಳಲ್ಲಿ ನಮ್ಮ ಕಾರ್ಯಕರ್ತರು ಎನ್ನುವ ಉದ್ದೇಶದಿಂದ ನಿಷ್ಠಾವಂತ ಕಾರ್ಯಕರ್ತರಿಗೆ ಅವಕಾಶ ನೀಡಿಲ್ಲ. ಒಂದು ವರ್ಷದಿಂದ ಪಕ್ಷದ ಯಾವುದೇ ಬೈಠಕ್, ಈಗ ಲೋಕಸಭಾ ಚುನಾವಣೆ ಪ್ರಚಾರ ಸಭೆಗಳಿಗೂ ನನ್ನನ್ನು ಆಹ್ವಾನಿಸದೆ ಅವಮಾನ ಮಾಡಿದ್ದಾರೆ. ಅತ್ಯಂತ ನೋವಿನಿಂದ ಪಕ್ಷಕ್ಕೆ ವಿದಾಯ ಹೇಳುತ್ತಿದ್ದೇನೆ ಎಂದರು.

ಹಿಂದೂ ಸಂಘಟನೆಗಳ ಮುಖಂಡ ಬಸವರಾಜ ಅರಳಿ ಮತ್ತು ಮಾಗಡಿ ಗ್ರಾ.ಪಂ ಸದಸ್ಯ ಯಲ್ಲಪ್ಪಗೌಡ ಪಾಟೀಲ, ದೇವಪ್ಪ ಗಡೇದ ಮಾತನಾಡಿ, ಪಕ್ಷ ನಿಷ್ಠೆ ಹೊಂದಿದವರಿಗೆ ಇಲ್ಲಿ ಬೆಲೆಯೇ ಇಲ್ಲದಂತಾಗಿದೆ. ಕಾರ್ಯಕರ್ತರ ಕಡೆಗಣನೆಗೆ ಬೇಸತ್ತು ಗುರುನಾಥ ದಾನಪ್ಪನವರ ನೇತೃತ್ವದಲ್ಲಿ ಪಕ್ಷವನ್ನು ತ್ಯಜಿಸುವ ಸಂದರ್ಭ ಬಂದಿರುವದು ವಿಷಾದದ ಸಂಗತಿಯಾಗಿದೆ ಎಂದರು.

ಪತ್ರಿಕಾಗೋಷ್ಠಿಯಲ್ಲಿ ರವಿ ಲಿಂಗಶೆಟ್ಟಿ, ಶಿವಣ್ಣ ಡಂಬಳ, ಮಲ್ಲನಗೌಡ ಪಾಟೀಲ, ಜ್ಞಾನೋಬಾ ಬೋಮಲೆ ಮುಂತಾದವರು ಹಾಜರಿದ್ದರು.

## ತಹಸೀಲ್ದಾರ ಕಚೇರಿಯ ಅಂಬೇಡ್ಕರ ಜಯಂತಿ ಕಾರ್ಯಕ್ರಮದಲ್ಲಿ ವಾಸುದೇವ ಸ್ವಾಮಿ

# ಸ್ವಾಭಿಮಾನದ ಬದುಕಿಗೆ ಅಂಬೇಡ್ಕರರು ಆಧಾರ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರರು ವಿಶ್ವಶ್ರೇಷ್ಠವಾದ ಸಂವಿಧಾನ ಎಂಬ ಮಹಾಗ್ರಂಥವನ್ನು ದೇಶಕ್ಕೆ ನೀಡಿ, ದೇಶದ ಪ್ರತಿ ಪ್ರಜೆಗೂ ಸಮಾನ ನ್ಯಾಯ, ಹಕ್ಕು ಕಲ್ಪಿಸಿ ಎಲ್ಲರೂ ಸ್ವಾತಂತ್ರ, ಸ್ವಾಭಿಮಾನದ ಬದುಕು ಕಟ್ಟಿಕೊಳ್ಳಲು ಮೂಲಾಧಾರವಾಗಿದ್ದಾರೆ. ಅವರ ತತ್ವ, ಚಿಂತನೆ, ಆದರ್ಶವನ್ನು ಅಳವಡಿಸಿಕೊಂಡು ನವ ಭಾರತ ನಿರ್ಮಾಣಕ್ಕೆ ಬದ್ಧರಾಗೋಣ ಎಂದು ತಹಸೀಲ್ದಾರ ವಾಸುದೇವ ಸ್ವಾಮಿ ಹೇಳಿದರು.

ಅವರು ಭಾನುವಾರ ಪಟ್ಟಣದ ತಹಸೀಲ್ದಾರ ಕಚೇರಿಯಲ್ಲಿ ಅಂಬೇಡ್ಕರ ಜಯಂತಿ ಆಚರಿಸಿದ ಸಂದರ್ಭದಲ್ಲಿ ಮಾತನಾಡಿದರು.

ಸಮಾಜದಲ್ಲಿ ತುಳಿತಕ್ಕೆ ಒಳಗಾಗಿದ್ದ ಸಮುದಾಯದ ಜನರನ್ನು ಮುಖ್ಯವಾಹಿನಿಗೆ



> ಶತಮಾನಗಳಿಂದಲೂ ತುಳಿತಕ್ಕೊಳಗಾದವರಿಗೆ ಶಿಕ್ಷಣವೆಂಬ ಶಕ್ತಿಯನ್ನು ನೀಡಿ ಮೇಲೆತ್ತಲು ಮತ್ತು ಸಮಾನ ಅವಕಾಶ ನೀಡಿ ಶೋಷಣೆ ಮುಕ್ತ ಸಮಾಜ ನಿರ್ಮಾಣ ಮಾಡುವಲ್ಲಿ ತಮ್ಮನ್ನೇ ಸಮರ್ಪಿಸಿಕೊಂಡು, ನೀಡಿದ ಮಾರ್ಗದರ್ಶನದಲ್ಲಿಯೇ ದೇಶವಿಂದು ಮುನ್ನಡೆಯುತ್ತಿದೆ. ನವಭಾರತದ ನಿರ್ಮಾತೃ, ಸಮಾನತೆಯ ಹರಿಕಾರ ಅಂಬೇಡ್ಕರ ಬರೀ ವ್ಯಕ್ತಿಯಲ್ಲ, ದೇಶದ ಶಕ್ತಿಯಾಗಿದ್ದಾರೆ ಎಂದು ವಾಸುದೇವ ಸ್ವಾಮಿ ನುಡಿದರು.

ತರುವಲ್ಲಿ ಬಿ.ಆರ್. ಅಂಬೇಡ್ಕರರ ಶ್ರಮ ಅಪಾರ. ಅವರು ಸರ್ವರಿಗೂ ಸಮಬಾಳು ಎಂಬ ತತ್ವದಡಿ ದೇಶದ ಎಲ್ಲ ವರ್ಗ, ಜಾತಿ ಮತ್ತು ಧರ್ಮಗಳ ಜನರಿಗೆ ಅಸಾಮಾನ್ಯ ಪ್ರೇರಕ ಶಕ್ತಿಯಾಗಿದ್ದಾರೆ. ಅವರ ಸಮಾನತೆಯ ಆಶಯಗಳನ್ನು ಮುಂದುವರೆಸುವ ಜವಾಬ್ದಾರಿ ಪ್ರತಿ ಭಾರತೀಯರದ್ದಾಗಿದೆ. ಡಾ. ಬಿ.ಆರ್ ಅಂಬೇಡ್ಕರರು ದಲಿತ ನಾಯಕ ಮತ್ತು ಸಂವಿಧಾನ ಶಿಲ್ಪಿ ಅಷ್ಟೇ ಅಲ್ಲ ಅವರು ಸಮಾಜದಲ್ಲಿನ ಅಜ್ಞಾನ, ಮೇಲು-ಕೀಳು, ಅಸಮಾನತೆ ಮತ್ತು ಅಂಧಕಾರಗಳನ್ನು ತೊಡೆದು ಸಮಾನತೆಯ ಸೂತ್ರ ರಚಿಸುವ ಮೂಲಕ ಸಾಮಾಜಿಕ ಬದಲಾವಣೆಯ ಹರಿಕಾರರಾಗಿದ್ದಾರೆ.

ಈ ವೇಳೆ ಸಮಾಜ ಕಲ್ಯಾಣ ಇಲಾಖೆಯ ಎಂ.ಎಸ್. ಸಂಕನೂರು, ಉಪ ತಹಸೀಲ್ದಾರ ಪ್ರಶಾಂತ ಕಿಮಾಯಿ, ಡಾ.ನೀಲಕಂಠ ಹವಳದ, ಬಿ.ಎಸ್. ಹಿರೇಮಠ, ಹಜರೇಸಾಬ ಅರಳಹಳ್ಳಿ, ಬಿ.ಎನ್. ರಾಟಿ, ನಾಗರಾಜ ದೊಡ್ಡಮನಿ, ಅನ್ನಪೂರ್ಣ ಹಳ್ಳಿಗುಡಿ, ನಂದಾ ನವಲೆ, ಗೀತಾ ಮುಳಗುಂದ, ಶಿವಾನಂದ ಬನ್ನಿ, ಎಸ್.ಎ. ಮಡಿವಾಳರ ಸೇರಿ ದಲಿತ ಸಮಾಜದ ಮುಖಂಡರು, ತಾ.ಪಂ ಕಚೇರಿ ಸಿಬ್ಬಂದಿಗಳು ಇದ್ದರು. ನಿರ್ಮಲಾ ಕೊಪ್ಪದಮಠ ನಿರೂಪಿಸಿದರು.

ಪಟ್ಟಣದ ಅಂಬೇಡ್ಕರ ನಗರ, ಪುರಸಭೆ, ತಾ.ಪಂ ಕಾರ್ಯಾಲಯ, ಸರ್ಕಾರಿ ಕಚೇರಿಗಳು, ಶಾಲಾ-ಕಾಲೇಜುಗಳಲ್ಲಿಯೂ ಅಂಬೇಡ್ಕರ ಜಯಂತಿ ಆಚರಿಸಲಾಯಿತು.

# ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಡಾ. ಅಂಬೇಡ್ಕರ್ ಜಯಂತಿ



■ವಿಜಯಸಾಕ್ಷಿ ಸುದ್ದಿ, ಧಾರವಾಡ

ಜಿಲ್ಲಾಧಿಕಾರಿಗಳ ಕಚೇರಿಯ ನೂತನ ಸಭಾಂಗಣದಲ್ಲಿ ರವಿವಾರ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಜಯಂತಿಯನ್ನು ಆಚರಿಸಲಾಯಿತು.

ಜಿಲ್ಲಾಧಿಕಾರಿ ದಿವ್ಯ ಪ್ರಭು ಹಾಗೂ ಮಹಾನಗರ ಪೊಲೀಸ್ ಆಯುಕ್ತರಾದ ರೇಣುಕಾ ಸುಕುಮಾರ ಅವರು ಡಾ. ಬಿ.ಆರ್. ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ, ಪುಷ್ಪಾರ್ಪಣೆ ಮಾಡಿ ಜಯಂತಿಯ ಶುಭಾಶಯ ಕೋರಿದರು.

ಬುದ್ದ ರಕ್ಕಿತ ಪ್ರೌಢಶಾಲೆಯ ವಿದ್ಯಾರ್ಥಿಗಳು ಪ್ರಾರ್ಥನೆ ಸಲ್ಲಿಸಿದರು. ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕಿ ಪಿ. ಶುಭಾ ಸ್ವಾಗತಿಸಿ, ವಂದಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪೊಲೀಸ್ ಅಧೀಕ್ಷಕ ಡಾ.ಗೋಪಾಲ ಬ್ಯಾಕೋಡ, ಜಿ.ಪಂ ಸಿಇಓ ಸ್ವರೂಪ ಟಿ.ಕೆ., ಜಿಲ್ಲಾ ಆರೋಗ್ಯಾಧಿಕಾರಿ ಡಾ.ಶಶಿ ಪಾಟೀಲ, ಜಿ.ಪಂ ಮುಖ್ಯ ಯೋಜನಾಧಿಕಾರಿ ದೀಪಕ ಮಡಿವಾಳರ, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ರಮೇಶ ಬಿ.ಎಸ್., ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕಿ ಪದ್ಮಾವತಿ, ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿಗಳು ಮತ್ತು ಸಮಾಜದ ಮುಖಂಡರಾದ ಸುಶೀಲಮ್ಮಾ ಚಲವಾದಿ, ಮಾಲಾ ತುರಿಹಾಳ್, ಕಲ್ಮೇಶ ಹಾದಿಮನಿ, ಅಶೋಕ್ ದೊಡ್ಡಮನಿ ಸೇರಿದಂತೆ ಇತರ ವಿವಿಧ ಮುಖಂಡರು, ಸಾರ್ವಜನಿಕರು ಭಾಗವಹಿಸಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka